ಕನ್ನಡಪ್ರಭ
ಗುರುವಾರ 7.05.2026

ಗರಿಷ್ಠ 36 c | ಕನಿಷ್ಠ 26 c

ಸುದ್ದಿ ಸಿಂಚನ

ಹೆಲಿಪ್ಯಾಡ್, ಹೆಲಿಕಾಪ್ಟರ್ ಸ್ಥಳ ಪರಿಶೀಲಿಸಿದ ಡಿಸಿ



ಕನಕಗಿರಿಯಿಂದ ಬೈಲಕ್ಕಂಪುರ ರಸ್ತೆ ಬಳಿ ಸಿದ್ಧವಾಗುವ ಹೆಲಿಪ್ಯಾಡ್ ಲ್ಯಾಂಡಿಂಗ್ ಸ್ಥಳವನ್ನು ಡಿಸಿ ಸುರೇಶ ಇಟ್ನಾಳ್ ಪರಿಶೀಲಿಸಿದರು.

ಕನಕಗಿರಿ: ಕನಕಗಿರಿ ಉತ್ಸವಕ್ಕೆ ಗಣ್ಯರು ಹೆಲಿಪ್ಯಾಡ್ ಮೂಲಕ ಬರಲಿದ್ದು, ಪಟ್ಟಣದ ಬೈಲಕ್ಕಂಪುರ ರಸ್ತೆಯ ಬಳಿಯ ಜಮೀನಿನಲ್ಲಿ ಲ್ಯಾಂಡ್ ಆಗುವ ಸ್ಥಳವನ್ನು ಜಿಲ್ಲಾಧಿಕಾರಿ ಸುರೇಶ ಇಟ್ನಾಳ್ ಹಾಗೂ ಎಸ್ಪಿ ರಾಮ್ ಎಲ್ ಅರಸಿದ್ದಿ ನೇತೃತ್ವದ ಅಧಿಕಾರಿಗಳ ತಂಡ ಬುಧವಾರ ಭೇಟಿ ನೀಡಿ ಪರಿಶೀಲಿಸಿತು. ಬೈಲಕ್ಕಂಪುರ ರಸ್ತೆಯ ಜಮೀನಿನಲ್ಲಿ ಗಣ್ಯರಿಗಾಗಿ ಬಂದು ಹೋಗುವ ಹೆಲಿಪ್ಯಾಡ್ ಸ್ಥಳವೆಂದು ಗುರುತಿಸಲಾಗಿದೆ. ತಾವರಗೇರಾ ರಸ್ತೆಯ ಜಮೀನುವೊಂದರಲ್ಲಿ ಬೈಸ್ಕೈ ಹಾರಾಟಕ್ಕಾಗಿ ವ್ಯವಸ್ಥೆ ಮಾಡಲು ಸೂಚಿಸಲಾಗಿದೆ. ನವಾಬ ಉಡಚಪ್ಪ ನಾಯಕ ಹಾಗೂ ಸ್ವಾತಂತ್ರ್ಯ ಹೋರಾಟಗಾರ ಜಯತೀರ್ಥ ರಾಜಪುರೋಹಿತರ ಹೆಸರಿನಲ್ಲಿ ಎರಡು ವೇದಿಕೆ ಸಿದ್ಧವಾಗಲಿದ್ದು, ಬಸ್ ನಿಲ್ದಾಣದಿಂದ ಜೂನಿಯರ್‌ಕಾಲೇಜಿಗೆ ಹೋಗುವ ರಸ್ತೆ ಬಳಿಯ ಜಮೀನಿನಲ್ಲಿ ರಾಜಾ ಉಡಚಪ್ಪ ನಾಯಕ ಮುಖ್ಯ ವೇದಿಕೆ ಜಾಗೆ ಗುರುತಿಸಲಾಗಿದೆ. ಇನ್ನೂ ಜಯತೀರ್ಥ ರಾಜಪುರೋಹಿತ ವೇದಿಕೆಯನ್ನು ಕನಕಾಚಲಪತಿ ದೇವಸ್ಥಾನದ ಪಕ್ಕದಲ್ಲಿ ಸಿದ್ಧಪಡಿಸಲು ಸ್ಥಳ ಪರಿಶೀಲನೆ ನಡೆಸಲಾಗಿದೆ. ಎಲ್ಲ ವ್ಯವಸ್ಥೆಯೂ ಅಚ್ಚುಕಟ್ಟಾಗಿ ಮಾಡಲು ಸೂಚಿಸಿದ್ದೇನೆ ಎಂದರು. ಅಪರ ಜಿಲ್ಲಾಧಿಕಾರಿ ಸಿದ್ಧರಾಮೇಶ್ವರ, ಸಹಾಯಕ ಆಯುಕ್ತ ಮಹೇಶ ಮಾಲಗಿತ್ತಿ, ಡಿವೈಎಸ್ಪಿ ಸಿದ್ದಲಿಂಗಪ್ಪಗೌಡ, ತಹಸೀಲ್ದಾರ್‌ವಿಶ್ವನಾಥ ಮುರುಡಿ, ತಾಪಂ ಇಒ ರಾಜಶೇಖರ, ಲೋಕೋಪಯೋಗಿ ಇಲಾಖೆಯ ಎಇಇ ವಿಶ್ವನಾಥ, ಪಪಂ ಮುಖ್ಯಾಧಿಕಾರಿ ಲಕ್ಷ್ಮಣ ಕಟ್ಟಿಮನಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು.

ನಗರ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾಗಿ ನಂದಾಪುರ ನೇಮಕ

ಗಂಗಾವತಿ: ವಿಧಾನ ಸಭಾ ಕ್ಷೇತ್ರದ ನಗರ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷರನ್ನಾಗಿ ನಾಗರಾಜ್ ನಂದಾಪುರ ಅವರನ್ನು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಿ.ಕೆ. ಶಿವಕುಮಾರ ನೇಮಕ ಮಾಡಿ ಆದೇಶ ನೀಡಿದ್ದಾರೆ. ತಕ್ಷಣ ನಾಗರಾಜ್ ನಂದಾಪುರ ಅಧಿಕಾರ ವಹಿಸಿಕೊಂಡು ಜಿಲ್ಲಾ ಕಾಂಗ್ರೆಸ್ ಸಮಿತಿಯ ಮಾರ್ಗದರ್ಶನದಲ್ಲಿ ಮತ್ತು ಸ್ಥಳೀಯ ನಾಯಕರ ಸಹಯೋಗದಲ್ಲಿ ಪಕ್ಷದ ಸಂಘಟನೆ ಮತ್ತು ಬಲವರ್ಧನೆಗೆ ಕಾರ್ಯೋನ್ಮುಖರಾಗಬೇಕೆಂದು ಆದೇಶ ಪತ್ರದಲ್ಲಿ ಸೂಚಿಸಿದ್ದಾರೆ.



ಯುವತಿ ನಾಪತ್ತೆ, ದೂರು

ಕೊಪ್ಪಳ: ತಾಲೂಕಿನ ಹೊಸಬಂಡಿಹರ್ಲಾಪುರ ಗ್ರಾಮದ ಯುವತಿಯೋರ್ವಳು ನಾಪತ್ತೆಯಾಗಿದ್ದು, ಅವರ ತಾಯಿ ಸೌಭಾಗ್ಯ ನೀಡಿದ ದೂರಿನ ಆಧಾರದ ಮೇಲೆ ಮುನಿರಾಬಾದ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಏ. 30ರಂದು ಸುಮಿತ್ರಾ ಮನೆಯಲ್ಲಿ ಯಾರಿಗೂ ಹೇಳದೆ ಕೇಳದೆ ಹೋಗಿದ್ದು, ಮರಳಿ ಬರದೆ ಇರುವುದು ಪಾಲಕರಲ್ಲಿ ಆತಂಕಕ್ಕೆ ಕಾರಣವಾಗಿದೆ. ಸುತ್ತಮುತ್ತಲು ಹುಡುಕಿದರೂ ಸಿಗದೆ ಇದ್ದಿದ್ದರಿಂದ ಮುನಿರಾಬಾದ್ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಲಾಗಿದೆ.



ಕುಷ್ಟಗಿ ತಾಲೂಕಿನ ಎಂ ಗುಡದೂರು ಗ್ರಾಮದಲ್ಲಿ ನಡೆದ ಕಿತ್ತೂರು ರಾಣಿ ಚೆನ್ನಮ್ಮ ವೃತ್ತ ಹಾಗೂ ಮೂರ್ತಿ ಅನಾವರಣ ಸಮಾರಂಭಕ್ಕೆ ಆಗಮಿಸಿದ ವಿಜಯಪುರ ಶಾಸಕ ಬಸನಗೌಡ ಯತ್ನಾಳ ಅವರನ್ನು ಅದ್ದೂರಿಯಾಗಿ ಮೆರವಣಿಗೆ ಮಾಡಲಾಯಿತು.



ಕೇರಳದ ಕಾಸರಗೋಡಿನ ಜಿಲ್ಲಾ ಪತ್ರಕರ್ತರ ಕ್ಷೇಮಾಭಿವೃದ್ಧಿ ಸಂಘ ನೀಡುವ ಜೆಎಂಡಿ ದತ್ತಿ ನಿಧಿ ಪ್ರಶಸ್ತಿಗೆ ಆಯ್ಕೆಯಾಗಿರುವ ಪತ್ರಕರ್ತ ವಿಶ್ವನಾಥ ಬೆಳಗಲ್‌ಮಠ ಅವರನ್ನು ಗಂಗಾವತಿಯ ಪತ್ರಕರ್ತರ ಸಂಘದಿಂದ ಗೌರವಿಸಲಾಯಿತು.

ವಿಶ್ವನಾಥ ಬೆಳಗಲ್‌ಮಠ ಅವರಿಗೆ ಸನ್ಮಾನ

• **ಕನ್ನಡಪ್ರಭ ವಾರ್ತೆ** ಗಂಗಾವತಿ

ಕೇರಳದ ಕಾಸರಗೋಡಿನ ಜಿಲ್ಲಾ ಪತ್ರಕರ್ತರ ಕ್ಷೇಮಾಭಿವೃದ್ಧಿ ಸಂಘ ನೀಡುವ ಜೆಎಂಡಿ ದತ್ತಿ ನಿಧಿ ಪ್ರಶಸ್ತಿಗೆ ಆಯ್ಕೆಯಾಗಿರುವ ಪತ್ರಕರ್ತ ವಿಶ್ವನಾಥ ಬೆಳಗಲ್‌ಮಠ ಅವರನ್ನು ಪತ್ರಕರ್ತರ ಸಂಘದಿಂದ ಗೌರವಿಸಲಾಯಿತು.

ಅವರ ನಿವಾಸಕ್ಕೆ ತೆರಳಿದ ಸಂಘದ ಸದಸ್ಯರು ಪತ್ರಕರ್ತ ವಿಶ್ವನಾಥ ಬೆಳಗಲ್ ಮಠ ಅವರನ್ನು ಸನ್ಮಾನಿಸಿ ಗೌರವಿಸಿದರು. ಈ ವೇಳೆ ಮಾತನಾಡಿದ ಪತ್ರಕರ್ತ ಸುದರ್ಶನ ವೈದ್ಯ ಅವರು, 30 ವರ್ಷಗಳಿಂದ ಸಂಪಾದಕರಾಗಿ ಹಾಗೂ ವಿವಿಧ ರಾಜ್ಯ ಮತ್ತು ಪ್ರಾದೇಶಿಕ ಪತ್ರಿಕೆಗಳಲ್ಲಿ ಅವರು ಸಲ್ಲಿಸಿದ ಸೇವೆಯನ್ನು ಪರಿಗಣಿಸಿ, ಯಾವುದೇ ಅರ್ಜಿ ಸಲ್ಲಿಸದೇ ಇದ್ದರೂ ಪ್ರಶಸ್ತಿಗೆ ಆಯ್ಕೆ ಮಾಡಿರುವುದು ಪತ್ರಕರ್ತರಿಗೆ ಸಂತಸ ತಂದಿದೆ ಎಂದರು.

ವಿ.ಎಸ್. ಪಾಟೀಲ್, ಮುಕ್ಕಣ್ಣ ಕತ್ತಿ, ಶ್ರೀನಿವಾಸ ದೇವಿಕೇರಿ, ವಸಂತ್ ಕುಮಾರ್, ವೃಷಭೇಂದ್ರ ಸ್ವಾಮಿ, ವೆಂಕಟೇಶ್ ಉಪ್ಪಾರ್, ದಶರಥ, ಶರಣಯ್ಯ ಸ್ವಾಮಿ, ಮಲ್ಲಿಕಾರ್ಜುನ ಗೋಟೂರು, ಲಕ್ಷ್ಮಣ, ದಿವಾಕರ, ಕಾಶೀನಾಥ, ಎಂ.ಜೆ. ಶ್ರೀನಿವಾಸ, ರಾಮಕೃಷ್ಣ ಉಪಸ್ಥಿತರಿದ್ದರು.

ಅಚ್ಚುಕಟ್ಟಾಗಿ ಕನಕಗಿರಿ ಉತ್ಸವ ನಿರ್ವಹಿಸಲು ಕ್ರಮಕ್ಕೆ ಸೂಚನೆ

ಕನಕಗಿರಿಯ ತಾಪಂ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ನೇತೃತ್ವದಲ್ಲಿ ಸಭೆ

• **ಕನ್ನಡಪ್ರಭ ವಾರ್ತೆ** ಕನಕಗಿರಿ

2026ರ ಕನಕಗಿರಿ ಉತ್ಸವವನ್ನು ಅಚ್ಚುಕಟ್ಟಾಗಿ ನಡೆಸಲು ಅಧಿಕಾರಿಗಳು ಹಾಗೂ ಜವಾಬ್ದಾರಿ ವಹಿಸಿರುವ ಸಮಿತಿಯವರು ಕಾರ್ಯ ಪ್ರವೃತ್ತರಾಗಬೇಕು ಎಂದು ಜಿಲ್ಲಾಧಿಕಾರಿ ಸುರೇಶ ಇಟ್ನಾಳ್ ಸೂಚಿಸಿದರು.

ಅವರು ಇದೇ ತಿಂಗಳ 16 ಹಾಗೂ 17ರಂದು ನಡೆಯುವ ಕನಕಗಿರಿ ಉತ್ಸವ ಆಚರಣೆ ಹಿನ್ನೆಲೆಯಲ್ಲಿ ಬುಧವಾರ ತಾಪಂ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ವಿವಿಧ ಇಲಾಖೆಯ ಅಧಿಕಾರಿ ಒಳಗೊಂಡ ಉತ್ಸವ ಆಚರಣಾ ಸಮಿತಿಗಳೊಂದಿಗೆ ಮಾತನಾಡಿದರು.

ಉತ್ಸವಕ್ಕೆ ಕಳೆ ತರುವ ಕಲಾವಿದರಿಗೆ ಗೌರವ ಸಮರ್ಪಣೆಗೆ ಬೇಕಾದ ಎಲ್ಲ ಸಾಮಗ್ರಿ ಹೊಂದಿಸಿಕೊಳ್ಳಬೇಕು. ಕಾರ್ಯಕ್ರಮ ನಡೆಯುವಾಗ ಗೊಂದಲ ಮಾಡಿಕೊಳ್ಳಬಾರದು. ಉತ್ಸವದಲ್ಲಿ ಭಾಗಿಯಾದ ಎಲ್ಲ ಕಲಾವಿದರಿಗೂ ಗೌರವ ಸಲ್ಲಿಸುವ ನಿಟ್ಟಿನಲ್ಲಿ ಕಾರ್ಯಕ್ರಮ ಅರ್ಥಪೂರ್ಣವಾಗಿ ನಡೆಸಬೇಕು ಎಂದು ಸಾಂಸ್ಕೃತಿಕ ಸಮಿತಿಗೆ ಆದೇಶಿಸಿದರು.

ಇನ್ನೂ ಸಮಿತಿವಾರು ಪ್ರಗತಿ ಪರಿಶೀಲಿಸಿದ ಜಿಲ್ಲಾಧಿಕಾರಿಗಳು, ಅತಿಥಿಗಳ ಸ್ವಾಗತ, ವಸತಿ, ಊಟ, ಸಾರಿಗೆ, ಗಣ್ಯರಿಗೆ ಸನ್ಮಾನ, ಶಿಷ್ಟಾಚಾರದ ಬಗ್ಗೆ ಗಮನ ಹರಿಸಲು ಸಹಾಯಕ ಆಯುಕ್ತರ ಅಧ್ಯಕ್ಷತೆಯ ಸ್ವಾಗತ ಸಮಿತಿಗೆ ಸೂಚನೆ ನೀಡಿದರು. ಜನಸಂದಣಿ ನಿಯಂತ್ರಣಕ್ಕಾಗಿ ನಗರದ ಅಲ್ಲಲ್ಲಿ ಬ್ಯಾರಿಕೆಡ್ ಹಾಕಬೇಕು. ಜತೆಗೆ ಮುಖ್ಯ ವೇದಿಕೆಯ ಮುಂಭಾಗ, ಅಕ್ಕ-ಪಕ್ಕದಲ್ಲಿ ವ್ಯವಸ್ಥೆ ಮಾಡಬೇಕು ಎಂದು ವೇದಿಕೆ ಸಮಿತಿಗೆ ಸೂಚನೆ ನೀಡಿದರು.

ಎಪಿಎಂಸಿ ಆವರಣದ ಓಪನ್ ಶೆಡ್ ನಲ್ಲಿ ಉತ್ಸವ ಬರುವವರಿಗೆ ಊಟದ ವ್ಯವಸ್ಥೆ ಮಾಡಲಾಗುತ್ತಿದ್ದು, ಆಹಾರ ತಯಾರಿಸುವಾಗ ಜಾಗೃತಿವಹಿಸಬೇಕು. ಶುಚಿತ್ವ ಕಾಪಾಡಿಕೊಳ್ಳಬೇಕು. ಆಹಾರ ಶುಚಿ, ರುಚಿಯ ಬಗ್ಗೆ ಕಾಳಜಿ ವಹಿಸಬೇಕು. ಸ್ಥಳೀಯ ಸಂಸ್ಥೆಗಳ ಸಹಕಾರ ಪಡೆದು ತಂಡಗಳ ರಚಿಸಿ ಎಲ್ಲರಿಗೂ ಊಟ ಬಡಿಸುವಂತಾಗಬೇಕು ಎಂದು ಆಹಾರ ಸಮಿತಿಗೆ ಸೂಚಿಸಿದರು.

ಅಲ್ಲದೇ ಆಯಾ ಕ್ರೀಡಾ ತಂಡಗಳ ವಿವರ, ಪಾವತಿಸಬೇಕಾದ ಸಂಭಾವನೆ ಎಲ್ಲವೂ ಪಾರದರ್ಶಕವಾಗಿರಬೇಕು. ಕಲಾವಿದರು, ಕ್ರೀಡಾಪಟುಗಳು ಹಾಗೂ ಪತ್ರಕರ್ತರಿಗೆ ರೂಮು ಕಾಯ್ದಿರಿಸುವ ಎಲ್ಲ ಕಡೆಗೆ ನೋಡಲ್ ಅಧಿಕಾರಿಗಳನ್ನು ನಿಯೋಜಿಸಬೇಕು ಎಂದು ವಸತಿ ಸಮಿತಿಗೆ ನಿರ್ದೇಶನ ನೀಡಿದರು. ಸುಮಾರು 500 ಬಸ್ಸುಗಳಿಗೆ ಉತ್ಸವದ ಪೋಸ್ಟರ್‌ಅಂಟಿಸುವ ಮೂಲಕ ಪ್ರಚಾರ ಕೈಗೊಳ್ಳಬೇಕು. ಮತ್ತಷ್ಟು ವ್ಯಾಪಕ ಪ್ರಚಾರ ಕೈಗೊಳ್ಳಬೇಕು ಎಂದು ತಿಳಿಸಿದರು.

ಇನ್ನೂ ಹೆಲಿಕ್ಯಾಪ್ಟರ್‌ರೈಡಿಂಗ್ ಕಾರ್ಯವು ಸುರಕ್ಷಿತ ಕ್ರಮಗಳೊಂದಿಗೆ ಹಾರಾಟ ನಡೆಸಲು ಮುಂದಾಗಬೇಕು. ಇನ್ನೂ ವೇದಿಕೆಯ ಮುಂಭಾಗದಲ್ಲಿ ತಾತ್ಕಾಲಿಕ ಒಪಿಡಿ ತೆರೆಯಬೇಕು. ನಗರದ ಸ್ವಚ್ಛತೆ ಮತ್ತು ವೇದಿಕೆ ಪ್ರದೇಶದಲ್ಲಿ ಮರಮು ಹಾಕಿಸಿ ನೆಲ ಸಮತಟ್ಟುಗೊಳಿಸಬೇಕು. ದುರಸ್ಥಿಗೊಂಡ ರಸ್ತೆಗಳಿಗೆ ಡಾಂಬರೀಕರಣ ಮಾಡಬೇಕು. ಸಾರ್ವಜನಿಕರಿಗಾಗಿ ನಳ ಹಾಗೂ ತಾತ್ಕಾಲಿಕ ಶೌಚಾಲಯ ನಿರ್ಮಾಣ ಮಾಡಲು ಸೂಚಿಸಿದರು.

ಪಪಂ ಅಧ್ಯಕ್ಷೆ ತನುಶ್ರೀ ಟಿ.ಜೆ.ರಾಮಚಂದ್ರ, ಉಪಾಧ್ಯಕ್ಷ ಕಂಠಿರಂಗಪ್ಪ ನಾಯಕ, ಎಸ್ಪಿ ಡಾ. ರಾಮ್ ಎಲ್ ಅರಸಿದ್ದಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಸಹಾಯಕ ಆಯುಕ್ತ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಡಿವೈಎಸ್ಪಿ ಸಿದ್ದಲಿಂಗಪ್ಪಗೌಡ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಂಜುನಾಥ ಗುಂಡೂರ, ತಹಸೀಲ್ದಾರ ವಿಶ್ವನಾಥ ಮುರಡಿ, ತಾಪಂ ಇಒ ಕೆ. ರಾಜಶೇಖರ ಇದ್ದರು.



ಕನಕಗಿರಿಯ ತಾಪಂ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ಸುರೇಶ ಇಟ್ನಾಳ್ ಸಮ್ಮುಖದಲ್ಲಿ ಅಧಿಕಾರಿಗಳ ಸಭೆ ನಡೆಯಿತು.

35 ಸಾವಿರ ಚೇರ್ ವ್ಯವಸ್ಥೆ

ಮುಖ್ಯ ವೇದಿಕೆಯಾಗಿರುವ ರಾಜಾ ಉಡಚಪ್ಪ ನಾಯಕ ವೇದಿಕೆಯ ಮುಂಭಾಗದಲ್ಲಿ 35 ಸಾವಿರ ಆಸನ ಹಾಕಬೇಕು. ಕಳೆದ ಬಾರಿ 25 ಸಾವಿರ ಹಾಕಲಾಗಿತ್ತು. ಈ ಬಾರಿ 10 ಸಾವಿರಕ್ಕೂ ಹೆಚ್ಚು ಮಾಡಬೇಕು. ವೇದಿಕೆ ಸಂಪೂರ್ಣವಾಗಿ ಬೆಳಕಿನಿಂದ ಕೂಡಿರಬೇಕು ಎಂದು ವೇದಿಕೆ ಸಮಿತಿಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಉತ್ಸವ ನಿಮಿತ್ತ ಪಟ್ಟಣದ 4 ವೃತ್ತಗಳಿಗೆ ಹಾಗೂ 12 ಇತಿಹಾಸ ಪ್ರಸಿದ್ಧ ದೇಗುಲಗಳಿಗೆ ವಿದ್ಯುತ್ ದೀಪಾಲಂಕಾರ ಮಾಡುವುದಕ್ಕಾಗಿ ಪಟ್ಟಿ ಮಾಡಿಕೊಳ್ಳಲಾಗಿದೆ. ಝುಗಮಗಿಸುವ ರೀತಿಯಲ್ಲಿ ಜನಾಕರ್ಷಿಸುವಂತೆ ಅಲಂಕಾರ ಮಾಡಬೇಕು. ಫಲಪುಷ್ಪ ಪ್ರದರ್ಶನ, ಪುಸ್ತಕ ಸೇರಿದಂತೆ ರೈತರಿಗೆ ಉಪಯುಕ್ತವಾದ ನಾನಾ ಸಾಮಗ್ರಿ ಪ್ರದರ್ಶನ ಮಳಿಗೆಗಳನ್ನು ಶಿಸ್ತುಬದ್ಧವಾಗಿ ಸಿದ್ಧತೆ ಮಾಡಿಕೊಳ್ಳಲು ಸೂಚಿಸಿರುವೆ.

• **ಸುರೇಶ ಇಟ್ನಾಳ್** ಜಿಲ್ಲಾಧಿಕಾರಿ

ಜಿಲ್ಲಾ ಆರೋಗ್ಯ ಇಲಾಖೆಯ ಮೂಲಕ ಸರ್ಕಾರಕ್ಕೆ ಮನವಿ

ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಆಶಾ ಕಾರ್ಯಕರ್ತರ ಮನವಿ

• **ಕನ್ನಡಪ್ರಭ ವಾರ್ತೆ** ಕೊಪ್ಪಳ

ವಿವಿಧ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ಆಶಾ ಕಾರ್ಯಕರ್ತೆಯರ ಜಿಲ್ಲಾ ಸಮಿತಿಯಿಂದ ಜಿಲ್ಲಾ ಆರೋಗ್ಯ ಇಲಾಖೆಯ ಅಧಿಕಾರಿಗಳ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.

ಆಶಾ ಕಾರ್ಯಕರ್ತೆಯರಿಗೆ ಬಾಕಿ ಇರುವ ಕೇಂದ್ರದ ಪ್ರೋತ್ಸಾಹ ಧನ ಹಾಗೂ ರಾಜ್ಯದ ಗೌರವಧನ ಕೂಡಲೇ ಬಿಡುಗಡೆ ಮಾಡಬೇಕು. 9 ವಿಧದ ಆಶಾ ಸೇವೆ ಆಶಾ ನಿಧಿ ತಂತ್ರಾಂಶದಲ್ಲಿ ನಿಷ್ಕ್ರಿಯಗೊಳಿಸಿರುವುದರಿಂದ ತಿಂಗಳಿಗೆ ₹500ದಿಂದ₹1000ವರೆಗೆಪ್ರೋತ್ಸಾಹಧನ ಕಡಿಮೆಯಾಗುತ್ತಿದ್ದು ಈ ಸೇವೆ ತಕ್ಷಣ ಪುನರಾರಂಭ ಮಾಡಬೇಕು. ಆಶಾ ಕಾರ್ಯಕರ್ತೆಯರಿಗೆ ಕೆಲಸದ ಪ್ರಮಾಣ ಹೆಚ್ಚಿದರೂ ಅದಕ್ಕನುಗುಣವಾಗಿ ಪ್ರೋತ್ಸಾಹಧನ ಮತ್ತು ಗೌರವಧನ ಹೆಚ್ಚಳ ಮಾಡಬೇಕು. ಸೇವಾ ನಿಯಮಾವಳಿ ಸ್ಪಷ್ಟಪಡಿಸಬೇಕು. ಆರೋಗ್ಯ ಸೇವೆಯಲ್ಲಿ ಪ್ರಮುಖ ಪಾತ್ರವಹಿಸುವ ಆಶಾ ಕಾರ್ಯಕರ್ತೆಯರಿಗೆ ಮೂಲಭೂತ ಸೌಲಭ್ಯ, ಭದ್ರತೆ ಮತ್ತು ಗೌರವ ಒದಗಿಸಬೇಕು. ಆಶಾಕಾರ್ಯಕರ್ತೆಯರಿಗೆ ನೀಡಲಾಗುತ್ತಿರುವ ಪ್ರೋತ್ಸಾಹಧನ ಕಡಿತಗೊಳಿಸದೆ ನಿಯಮಿತವಾಗಿ ಪಾವತಿಸಬೇಕು. ಎಲ್ಲ ಬಾಕಿ ಹಣ ತಕ್ಷಣ ಬಿಡುಗಡೆ ಮಾಡಬೇಕು.ಸೇವಾ ಅವಧಿ ಪರಿಗಣಿಸಿ ಶಾಶ್ವತ ಉದ್ಯೋಗದ ಭದ್ರತೆ ಒದಗಿಸಬೇಕು. ಸಾಮಾಜಿಕ ಭದ್ರತಾ ಯೋಜನೆ ಜಾರಿಗೊಳಿಸಬೇಕು. ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಆಶಾ ಕಾರ್ಯಕರ್ತೆಯರ ಸಮಸ್ಯೆಗಳಿಗೆ ತ್ವರಿತ ಪರಿಹಾರ ನೀಡಲು ಸಂಬಂಧಪಟ್ಟ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಸರ್ಕಾರದ ವಿವಿಧ ಆರೋಗ್ಯ ಯೋಜನೆಗಳಲ್ಲಿ ಆಶಾ ಕಾರ್ಯಕರ್ತೆಯರ ಪಾತ್ರ ಪರಿಗಣಿಸಿ ಅವರಿಗೆ ಪ್ರೋತ್ಸಾಹಕ ಯೋಜನೆ ಜಾರಿಗೊಳಿಸಬೇಕು ಹಾಗೂ ನ್ಯಾಯಯುತ ಸೌಲಭ್ಯ ನೀಡಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಶರಣು ಗಡ್ಡಿ, ಜಿಲ್ಲಾ ಕಾರ್ಯದರ್ಶಿ ಕೌಶಲ್ಯ ದೊಡ್ಡಗೌಡರ್, ಗೌರವಾಧ್ಯಕ್ಷೆ ಶೋಭಾ ಹೂಗಾರ್, ಯಲಬುರ್ಗಾ ತಾಲೂಕು ಮುಖಂಡ ಅನ್ನಪೂರ್ಣ, ಶಿವಮ್ಮ ಸೇರಿದಂತೆ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.



ವಿವಿಧ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ಆಶಾ ಕಾರ್ಯಕರ್ತೆಯರ ಜಿಲ್ಲಾ ಸಮಿತಿಯಿಂದ ಜಿಲ್ಲಾ ಆರೋಗ್ಯ ಇಲಾಖೆಯ ಅಧಿಕಾರಿಗಳ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.

ಹೇಮರಡ್ಡಿ ಮಲ್ಲಮ್ಮ ಜಯಂತಿ ಅರ್ಥಪೂರ್ಣ ಆಚರಣೆಗೆ ನಿರ್ಧಾರ

• **ಕನ್ನಡಪ್ರಭ ವಾರ್ತೆ** ಯಲಬುರ್ಗಾ

ಶಿವಶರಣೆ ಹೇಮರಡ್ಡಿಮಲ್ಲಮ್ಮ ಜಯಂತಿಯನ್ನು ಮೇ10ರಂದು ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ ಎಂದು ತಹಸೀಲ್ದಾರ್‌ಪ್ರಕಾಶ ನಾಶಿ ಹೇಳಿದರು.

ಪಟ್ಟಣದ ತಹಸೀಲ್ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತಿ ಆಚರಣೆ ಪೂರ್ವಭಾವಿ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಜಯಂತಿಯಂದು ಎಲ್ಲ ಇಲಾಖೆ ಕಚೇರಿಯಲ್ಲಿ ಕಡ್ಡಾಯವಾಗಿ ಮಲ್ಲಮ್ಮ ಭಾವಚಿತ್ರಕ್ಕೆ ಪೂಜೆ ಸಲ್ಲಿಸಬೇಕು. ಅಲ್ಲದೆ ಜಯಂತಿ ಆಚರಣೆ ವರದಿ ಒಪ್ಪಿಸಬೇಕು ಎಂದರು. ಕಷ್ಟದಲ್ಲೂ ಎಲ್ಲರ ಒಳಿತನ್ನೇ ಬಯಸಿದ ಮಹಾಸಾಧ್ವಿ ಹೇಮರಡ್ಡಿ ಮಲ್ಲಮ್ಮ ಅವರ ಜೀವನ ಆದರ್ಶ ಎಲ್ಲ ಮಹಿಳೆಯರಿಗೆ ಮಾದರಿಯಾಗಿದೆ. ಮಹಿಳೆ ಸಹನಾ ಮೂರ್ತಿ. ಭೂಮಿಗೆ ಮಹಿಳೆಯನ್ನು ಹೋಲಿಸಲಾಗುತ್ತದೆ. ಕರುಣಾಮಯಿ ಹೆಣ್ಣು ವಿಶ್ವವನ್ನು ಪೊರೆಯುವ ತಾಯಿಯಂತೆ. ಅಂತಹ ಸ್ವರೂಪಿಯಾಗಿ ಮಲ್ಲಮ್ಮ ಅವತರಿಸಿದ್ದರು. ಸಮಾಜ ಸುಧಾರಣೆಯನ್ನು ಮಾಡುವುದು ಅಷ್ಟು ಸುಲಭವಲ್ಲ. ಅದರಲ್ಲೂ ಮಹಿಳೆ ಸಮಾಜ ಸುಧಾರಣೆ ಮಾಡಲು ಮುಂದು ಬರದ ಕಾಲದಲ್ಲಿ ಹೇಮರಡ್ಡಿ ಮಲ್ಲಮ್ಮ ಮಹಿಳೆಯರ ಪ್ರತಿನಿಧಿಯಾಗಿ ನಿಲ್ಲುತ್ತಾರೆ. ಅವರ ಆತ್ಮಬಲವನ್ನು ಎಲ್ಲ ಮಹಿಳೆಯರು ಹೊಂದಬೇಕು ಎಂದು ಸಲಹೆ ನೀಡಿದರು

ಸಮಾಜದ ಅಧ್ಯಕ್ಷ ಸಂಗಪ್ಪ ವಕ್ಕಳದ ಮಾತನಾಡಿ, ಮೇ 10ರ ಬಳಿಕ ಯಲಬುರ್ಗಾ-ಕುಕನೂರು ತಾಲೂಕು ರೆಡ್ಡಿ ಸಮಾಜದ ಸಭೆ ಕರೆದು ಬಳಿಕ ದಿನ ನಿಗದಿ ಮಾಡುತ್ತೇವೆ, ಈ ಸಮಾರಂಭಕ್ಕೆ ಎಲ್ಲರ ಸಹಕಾರ ಅಗತ್ಯವಾಗಿದೆ, ತಾಲೂಕಿನ 35 ಗ್ರಾಮಗಳಲ್ಲಿ ರಡ್ಡಿ ಸಮುದಾಯದ ಜನ ವಾಸವಿದ್ದಾರೆ ಎಂದರು. ಶಶಿಧರ ಸಕ್ರಿ, ಪಿ.ಬಿ. ಕುಂಬಾರ, ಬಸವರಾಜ ಗೊಗೇರಿ, ದೇವರಡ್ಡಿ ಮುಂದಲಮನಿ, ಮುಖಂಡರಾದ ಅರವಿಂದ ಮುಂದಲಮನಿ, ದೇವಪ್ಪ ಅರಕೇರಿ, ಡಾ. ಶಿವನಗೌಡ ದಾನರಡ್ಡಿ, ಅಶೋಕ ಮಾದಿನೂರು, ಅರವಿಂದ ಮುಂದಲಮನಿ, ಬಸವರಡ್ಡಿ ಬೀಡನಾಳ ಸೇರಿದಂತೆ ಇದ್ದರು.

ಬಲ್ಡೋಟಾ ಭೂ ಸ್ವಾಧೀನ ಕಾನೂನುಬದ್ಧ: ಮಹೇಶ ಮಾನಕರೆ

• **ಕನ್ನಡಪ್ರಭ ವಾರ್ತೆ** ಕೊಪ್ಪಳ

ಬಲ್ಡೋಟಾ ಸಮೂಹ ಸಂಸ್ಥೆ ಕೊಪ್ಪಳ ಬಳಿ ಉಕ್ಕು ಕಾರ್ಖಾನೆ ಸ್ಥಾಪಿಸಲು ಕಾನೂನುಬದ್ಧವಾಗಿಯೇ ಭೂ ಸ್ವಾಧೀನ ಮಾಡಿಕೊಳ್ಳಲಾಗಿದೆ ಮತ್ತು ಇದನ್ನು ಸುಪ್ರೀಂ ಕೋರ್ಟ್ ಸಹ ಎತ್ತಿ ಹಿಡಿದಿದೆ ಎಂದು ಬಲ್ಡೋಟಾ ಗ್ರುಪ್ ಹಿರಿಯ ಮ್ಯಾನೇಜರ್‌ಮಹೇಶ ಮಾನಕರೆ ಹೇಳಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಬಲ್ಡೋಟಾ ಸಮೂಹದ ಸಮಗ್ರ ಉಕ್ಕಿನ ಯೋಜನೆಗಾಗಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (KIADB) ಮೂಲಕ ಭೂಮಿ ಸ್ವಾಧೀನಪಡಿಸಿಕೊಳ್ಳಲಾಗಿದೆ. ಈ ಸಂಪೂರ್ಣ ಭೂಸ್ವಾಧೀನ ಪ್ರಕ್ರಿಯೆಯು ಕಾನೂನುಬದ್ಧವಾಗಿದ್ದು ಮತ್ತು ಅದರ ಉದ್ದೇಶಿತ ಕೈಗಾರಿಕಾ ಬಳಕೆಗಾಗಿ ಸರಿಯಾಗಿದೆ ಎಂದು ಸುಪ್ರೀಂ ಕೋರ್ಟ್ ಎತ್ತಿ ಹಿಡಿದಿದೆ. ಬಲ್ಡೋಟಾ ಸಮೂಹವು ಈ ಭೂಮಿಯ ಕಾನೂನುಬದ್ಧ ಸಂರಕ್ಷಕರಾಗಿದ್ದು, ಅದರ ಅಭಿವೃದ್ಧಿ, ನಿರ್ವಹಣೆ ಮತ್ತು ಸುರಕ್ಷತೆಯ ಜವಾಬ್ದಾರಿ ಹೊಂದಿದೆ.

■ ಬಲ್ಡೋಟಾ ಸಮೂಹದ ಸಮಗ್ರ ಉಕ್ಕಿನ ಯೋಜನೆಗಾಗಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (KIADB) ಮೂಲಕ ಭೂಮಿ ಸ್ವಾಧೀನ

ಈ ಯೋಜನಾ ಸ್ಥಳದಲ್ಲಿ ಈಗಾಗಲೇ ಪೆಲೆಟ್ ಪ್ಲಾಂಟ್ (Pellet Plant) ಕಾರ್ಯನಿರ್ವಹಿಸುತ್ತಿದ್ದು, ಇಲ್ಲಿ ನಿರಂತರವಾಗಿ ಟ್ರಕ್‌ಗಳ ಸಂಚಾರವಿರುತ್ತದೆ ಮತ್ತು ಸುಮಾರು 800 ಜನರು ಕೆಲಸ ಮಾಡುತ್ತಿದ್ದಾರೆ. ಕಾರ್ಯನಿರ್ವಹಣೆಯ ಸ್ವರೂಪ ಗಮನದಲ್ಲಿಟ್ಟುಕೊಂಡು, ಸುರಕ್ಷತೆಯಲ್ಲಿ ಯಾವುದೇ ರಾಜಿ ಆಗದಂತೆ ನೋಡಿಕೊಳ್ಳುವ ಜವಾಬ್ದಾರಿ ನಮ್ಮ ಮೇಲಿದೆ. ಕೈಗಾರಿಕಾ ಪ್ರದೇಶದ ಆವರಣದೊಳಗೆ ಯಾವುದೇ ಅನಧಿಕೃತ ಅಥವಾ ಬಲವಂತದ ಪ್ರವೇಶ ಅತಿಕ್ರಮಣ ಎಂದು ಪರಿಗಣಿಸಲಾಗುತ್ತದೆ ಮತ್ತು ಸಂಬಂಧಿತ ಕಾನೂನುಗಳ ಅಡಿಯಲ್ಲಿ ಕಾನೂನು ಕ್ರಮ ಜರುಗಿಸಲಾಗುವುದು. ಈ ಮೂಲಕ ಸಂಬಂಧಪಟ್ಟ ಅಧಿಕಾರಿಗಳು ಮತ್ತು ಎಲ್ಲ ಸಂಬಂಧಪಟ್ಟವರು, ಕೇವಲ ಸತ್ಯಾಂಶ ಅವಲಂಬಿಸಬೇಕೆಂದು ಮತ್ತು ಯೋಜನಾ ಪ್ರದೇಶದ ಕಾನೂನುಬದ್ಧ ಸ್ಥಿತಿ ಗೌರವಿಸಬೇಕೆಂದು ವಿನಂತಿಸುವುದಾಗಿ ಹೇಳಿದ್ದಾರೆ.

ಪ್ರದರ್ಶನ | ಕೃಷ್ಣದೇವರಾಯ ನಾಟಕ ಪ್ರದರ್ಶನದಲ್ಲಿ ಸಿಡಿಸಿ ಉಪಾಧ್ಯಕ್ಷ ಸುಧೀರ ಸಲಹೆ

ವಿಜಯನಗರ ಸಾಮ್ರಾಜ್ಯದ ಅಧ್ಯಯನ ಅವಶ್ಯ

• **ಕನ್ನಡಪ್ರಭ ವಾರ್ತೆ** ಯಲಬುರ್ಗಾ

ವಿಜಯನಗರ ಸಾಮ್ರಾಜ್ಯ ದೊರೆ ಶ್ರೀಕೃಷ್ಣದೇವರಾಯರ ಕೊಡುಗೆ ಅಮೂಲ್ಯವಾಗಿದ್ದು, ಅವರ ತತ್ವ ಆದರ್ಶ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕಾಲೇಜು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ಸುಧೀರ್‌ಕೊರ್ಲಹಳ್ಳಿ ಹೇಳಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕೊಪ್ಪಳ ವಿವಿಯಿಂದ ಆಯೋಜಿಸಿದ್ದ ಶ್ರೀಕೃಷ್ಣದೇವರಾಯ ನಾಟಕ ಪ್ರದರ್ಶನಕ್ಕೆ ಚಾಲನೆ ನೀಡಿ ಮಾತನಾಡಿದರು.

ಇತಿಹಾಸ ಪುಟದಲ್ಲಿ ಅಜರಾಮರವಾಗಿರುವ ವಿಜಯನಗರ ಸಾಮ್ರಾಜ್ಯದ ಚರಿತ್ರೆ ಪ್ರತಿಯೊಬ್ಬರೂ ಅಧ್ಯಯನ ಮಾಡಬೇಕು. ಕೃಷ್ಣದೇವರಾಯ ಆಡಳಿತ, ನಾಡಪ್ರೇಮ ಸೇರಿದಂತೆ ಅವರು ನೀಡಿದ ಕೊಡುಗೆ ಅಪಾರವಾಗಿದೆ. ವಿಶ್ವವಿದ್ಯಾಲಯದ ಮಟ್ಟದಲ್ಲಿ ಶ್ರೀಕೃಷ್ಣದೇವರಾಯ ನಾಟಕ ಪ್ರದರ್ಶನ ಮಾಡುತ್ತಿರುವುದು ಒಳ್ಳೆಯ ಬೆಳವಣಿಗೆ. ಯುವ ಸಮುದಾಯದಲ್ಲಿ ನಾಡಿಗೆ ತಮ್ಮದೇ ಕೊಡುಗೆ ನೀಡಿರುವಂತಹ ರಾಜರ ಇತಿಹಾಸ ತಿಳಿಸುತ್ತಿರುವುದು ಉತ್ತಮ ಕಾರ್ಯವಾಗಿದೆ.ಇಡೀ ದೇಶಕ್ಕೆ ಹಂಪಿಯ ಆಡಳಿತ ಕಲೆ ವಾಸ್ತುಶಿಲ್ಪ ಮಹತ್ವದ ನೀಡಿದೆ. ಕಾಲೇಜು ದಿನಗಳಲ್ಲಿ ರಂಗಭೂಮಿ ಬಗ್ಗೆ ವಿದ್ಯಾರ್ಥಿಗಳಲ್ಲಿ ಆಸಕ್ತಿ ಮೂಡಿಸುತ್ತಿರುವುದು ಉತ್ತಮ ಬೆಳವಣಿಗೆಯಾಗಿದೆ ಎಂದರು.

ಶ್ರೀಕೃಷ್ಣದೇವರಾಯರು ತಮ್ಮ ಆಡಳಿತಾವಧಿಯಲ್ಲಿ ಕನ್ನಡ ನಾಡಿನ ಉಸಿರಿಗಾಗಿ ಹೋರಾಡಿದ್ದಾರೆ. ಇತಿಹಾಸದಲ್ಲಿ ಅವರ ಆಡಳಿತ ಅಜರಾಮರವಾಗಿ ಉಳಿದಿದೆ. ಹಂಪಿ ಕಲೆ ವಾಸ್ತುಶಿಲ್ಪದಲ್ಲಿ ಇಡೀ ವಿಶ್ವಕ್ಕೆ ಮಾದರಿಯಾಗಿದೆ. ಇದಕ್ಕೆ ರಾಯರ ಕೊಡುಗೆ ಅನನ್ಯವಾಗಿದೆ. ವಿದ್ಯಾರ್ಥಿಗಳು ನಮ್ಮ ನಾಡಿನ ರಾಜರ ಇತಿಹಾಸದ ಬಗ್ಗೆ ಅಧ್ಯಯನ ಮಾಡಬೇಕು ಎಂದರು.

ಪ್ರಾಚಾರ್ಯ ಕೆ.ಎಚ್. ಛತ್ರದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಶ್ರೀಕೃಷ್ಣದೇವರಾಯರ ಆಡಳಿತದಲ್ಲಿ ಸುವರ್ಣಯುಗ ಕಾಣುತ್ತೇವೆ. ಕನ್ನಡ ರಾಜಮನೆತನದಲ್ಲಿ ವಿಜಯನಗರ ಸಾಮ್ರಾಜ್ಯವು ತಮ್ಮ ಇತಿಹಾಸ ಹೊಂದಿದೆ. ಕೊಪ್ಪಳ ವಿವಿಯಿಂದ ನಾಟಕದ ಮೂಲಕ ವಿದ್ಯಾರ್ಥಿಗಳಲ್ಲಿ ಇತಿಹಾಸ ಪರಿಚಯಿಸುವ ಕೆಲಸ ಮಾಡುತ್ತಿದೆ ಎಂದರು.

ಈ ಸಂದರ್ಭ ಸಿಡಿಸಿ ಸದಸ್ಯ ಕಳಕಪ್ಪ ಕುರಿ, ಜಯಶ್ರೀ ಕಂದಕೂರು, ವಿರೂಪಾಕ್ಷಯ್ಯ ಗಂಧದ, ವಿಕಾಸ ಉಳ್ಳಾಗಡ್ಡಿ, ರೆಹಮಾನ್ ನಾಯಕ, ಕಳಕೇಶ ಸೂಡಿ, ಬಸವರಾಜ ಓಂಟೇಲಿ, ಲಿಂಗರಾಜ ಪಾಟೀಲ, ಕಸಾಪ ಹೋಬಳಿ ಘಟಕದ ಅಧ್ಯಕ್ಷ ಮಹಾಂತೇಶ ಛಲವಾದಿ, ಪ್ರಾಧ್ಯಾಪಕ ಅಶೋಕ ಕೆಂಚರಡ್ಡಿ, ಶಂಕ್ರಯ್ಯ, ನಂದಾ, ಮಂಜುಳಾ, ಬಿ. ಶಶಿಕುಮಾರ್, ವಂಶಿಕೃಷ್ಣ, ನಾಟಕ ಪ್ರದರ್ಶನ ವಿಭಾಗದ ಕೆ.ಜಗದೀಶ, ಉಪನ್ಯಾಸಕರು, ವಿದ್ಯಾರ್ಥಿಗಳು ಹಾಜರಿದ್ದರು.



ಯಲಬುರ್ಗಾದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಿದ್ದ ಶ್ರೀ ಕೃಷ್ಣದೇವರಾಯ ನಾಟಕ ಪ್ರದರ್ಶನಕ್ಕೆ ಚಾಲನೆ ನೀಡಲಾಯಿತು.

ಅದ್ಭುತ ಪ್ರದರ್ಶನ

ಕೊಪ್ಪಳ ವಿಶ್ವವಿದ್ಯಾಲಯ ವಿದ್ಯಾರ್ಥಿಗಳು ಶ್ರೀಕೃಷ್ಣದೇವರಾಯ ನಾಟಕ ಪ್ರದರ್ಶನದಲ್ಲಿ ಅದ್ಭುತ ಪ್ರದರ್ಶನ ನೀಡಿದರು. ನಾಟಕದ ಪ್ರತಿಯೊಂದು ಸನ್ನಿವೇಶಗಳಲ್ಲಿ ಶ್ರೀಕೃಷ್ಣದೇವರಾಯರ ವಿರಾವೇಶ ಮುಂತಾದ ಘಟನೆ ಸಾಕ್ಷಿಯಾದವು.

ಇಂದು ಕೆರೆಹಳ್ಳಿ ಉಪಕೇಂದ್ರದ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

ಕೊಪ್ಪಳ: ಜೆಸ್ಕಾಂ ಮುನಿರಾಬಾದ್ ಉಪ ವಿಭಾಗ ವ್ಯಾಪ್ತಿಯ ಕೆರೆಹಳ್ಳಿ ವಿದ್ಯುತ್ ವಿತರಣಾ ಉಪ ಕೇಂದ್ರದಲ್ಲಿ 1ನೇ ತ್ರೈಮಾಸಿಕ ನಿರ್ವಹಣಾ ಕಾರ್ಯ ನಿಮಿತ್ತ ಮೇ 7ರಂದು ಬೆಳಗ್ಗೆ 8 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದೆ. ಕೆರೆಹಳ್ಳಿ ವಿದ್ಯುತ್ ವಿತರಣಾ ಉಪ ಕೇಂದ್ರದ ವ್ಯಾಪ್ತಿಯ ಗ್ರಾಮಗಳಾದ ಕೆರೆಹಳ್ಳಿ, ಗುಳದಳ್ಳಿ, ಬೂದುಗುಂಪಾ, ಹಳೆಕುಮುಟಾ, ಬಿಳೆಬಾವಿ, ನಾಗೇಶನಹಳ್ಳಿ, ಇಂದಿರಾನಗರ, ಚಂದ್ರಗಿರಿ, ಜಬ್ಬಲಗುಡ್ಡ, ಕೂಕನಪಳ್ಳಿ, ವನಬಳ್ಳಾರಿ, ಇಂದರಗಿ ಮತ್ತು ಅಮರಾಪುರ, ಎಫ್.4 ಇಂದರಗಿ ಐಪಿ ಫೀಡರ್, ಎಫ್10 ನಾರಾಯಣ ಪೇಟೆ ಐಪಿ ಫೀಡರ್, ಎಫ್ 5 ವನಬಳ್ಳಾರಿ ಐಪಿ ಫೀಡರ್, ಎಫ್11 ಹಳೆಕುಮುಟಾ ಐಪಿ ಫೀಡರ್ ,ಎಫ್1 ಗುಳದಳ್ಳಿ ಐಪಿ ಫೀಡರ್, ಎಫ್.2 ಅಬ್ಬಿಗೇರಾ ಫೀಡರ್, ಎಫ್3 ಕೂಕನಪಳ್ಳಿ ಐಪಿ ಫೀಡರ್, ಎಫ್ 8 ಜಬ್ಬಲಗುಡ್ಡ ಐಪಿ ಫೀಡರ್, ಎಫ್ 3 ಇಂಡಸ್ಟ್ರಿಯಲ್ ಫೀಡರ್ ಮತ್ತು ಎಫ್ 9 ಎಕ್ಸಪ್ರೆಸ್ ಇಂಡಸ್ಟ್ರಿಯಲ್ ಫೀಡರ್, ಎಫ್ 12 ಸುಲ್ತಾನಪುರ ಫೀಡರ್, ಎಫ್1 ಡಿ.ಹೊಸಳ್ಳಿ ಐಪಿ ಫೀಡರ್ ಮತ್ತು ಎಫ್5 ಬೂದೇಶ್ವರ ಐಪಿ ಫೀಡರ್‌ನಲ್ಲಿ ಮೇ 7ರಂದು ಬೆಳಗ್ಗೆ 8 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ಸಹಕರಿಸಬೇಕು,ಕಾಮಗಾರಿ ನಿಗದಿತ ಸಮಯಕ್ಕಿಂತ ಮುಂಚಿತವಾಗಿ ಪೂರ್ಣಗೊಂಡಲ್ಲಿ ಯಾವುದೇ ಸಮಯದಲ್ಲೂ ವಿದ್ಯುತ್ ಸರಬರಾಜು ಪುನಃ ಪ್ರಾರಂಭಿಸಲಾಗುವುದು. ಸಾರ್ವಜನಿಕರು ವಿದ್ಯುತ್ ದುರಸ್ತಿ, ಸಂಬಂಧಿತ ಕೆಲಸ ಕೈಗೊಳ್ಳಬಾರದೆಂದು ಸೂಚಿಸಲಾಗಿದೆ. ವಿದ್ಯುತ್ ಅಪಘಾತ ಸಂಭವಿಸಿದಲ್ಲಿ ಕಂಪನಿ ಜವಾಬ್ದಾರರಾಗಿರುವುದಿಲ್ಲ ಎಂದು ಮುನಿರಾಬಾದ್ ಜೆಸ್ಕಾಂ ಕಾರ್ಯ ಮತ್ತು ಪಾಲನಾ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

> ಈಗೀನ ರಾಜಕಾರಣಿಗಳಲ್ಲಿ ಧೈರ್ಯ ಇಲ್ಲದಂತಾಗಿದೆ. ದೇವೇಗೌಡ ಪ್ರಧಾನಿ ಇರುವ ಸಂದರ್ಭದಲ್ಲಿ ತಮ್ಮ ಸಮುದಾಯವನ್ನು ಒಬಿಸಿಗೆ ಸೇರ್ಪಡೆ ಮಾಡಿದ್ದಾರೆ. ಆದರೆ ಈಗಿರುವ ನಮ್ಮ ರಾಜಕಾರಣಿಗಳು ನಾಟಕ ಕಂಪನಿಯಂತಾಗಿವೆ,
>
> • **ಬಸನಗೌಡ ಪಾಟೀಲ ಯತ್ನಾಳ,** ವಿಜಯಪುರ ಶಾಸಕ

ಸುದ್ದಿ ಸಿಂಚನ

ಹಿಂದೂ ಮುಸ್ಲಿಂ ಭಾವೈಕ್ಯದ ಶ್ಯಾಮೀದ ವಲಿ ಉರೂಸ್

ಕುಷ್ಟಗಿ: ಭಾವೈಕ್ಯಕ್ಕೆ ಹೆಸರಾದ ತಾಲೂಕಿನ ತಾವರಗೇರಾ ಪಟ್ಟಣದ ಹಜರತ್ ಸೈಯದ್ ಷಾ ಹಮಿದೋದ್ದಿನ್ ಖಾದ್ರಿ ಮತ್ತು ಸೈಯದ್ ಶಾಮೀದ ಅಲಿ ದರ್ಗಾ ಉರೂಸ್ ಸೋಮವಾರ ಸಂಭ್ರಮದಿಂದ ಜರುಗಿತು. ಉರೂಸ್ ಅಂಗವಾಗಿ ಸಾವಿರಾರು ಭಕ್ತರು ಬೆಳಗ್ಗೆಯಿಂದ ಶ್ಯಾಮಿದ ವಲಿ ದರ್ಗಾದಲ್ಲಿ ದರ್ಶನ ಪಡೆಯಲು ಸಾಲುಗಟ್ಟಿ ನಿಂತಿದ್ದರು. ಸಕ್ಕರೆ ನೈವೇದ್ಯ ಸಲ್ಲಿಸಿ ಭಕ್ತಿ ಸಮರ್ಪಣೆಗೈದರು. ಹಿಂದೂ ಮುಸ್ಲಿಂ ಭಾವೈಕ್ಯತೆ ಸಂಕೇತವಾದ ಈ ಉರೂಸ್‌ನಲ್ಲಿ ನೂರಾರು ಹರಕೆ ಹೊತ್ತ ಭಕ್ತರು ದೀರ್ಘದಂಡ ನಮಸ್ಕಾರ ಹಾಕುವುದು, ವಿವಿಧ ಕಾಣಿಕೆ ನೀಡುವುದು ಭಕ್ತಿಯನುಸಾರವಾಗಿ ಧಾರ್ಮಿಕತೆ ಮೆರೆಯುವುದು ಕಂಡು ಬಂದಿತು.ಶ್ಯಾಮಿದ ವಲಿ ದರ್ಗಾ ಆಡಳಿತ ಮಂಡಳಿ ಮತ್ತು ಪೊಲೀಸ್ ಇಲಾಖೆ ನೇತೃತ್ವದಲ್ಲಿ ಬಿಗಿ ಬಂದೋಬಸ್ತ್ ಕೈಗೊಳ್ಳಲಾಗಿತ್ತು.ಪಟ್ಟಣದ ಪ್ರಮುಖರು, ವಿವಿಧ ರಾಜಕೀಯ ಜನಪ್ರತಿನಿಧಿಗಳು ಆಗಮಿಸಿ ದರ್ಶನ ಪಡೆದರು.

ಸಂಗಮೇಶ ಗಡಾದ ರಾಜ್ಯಮಟ್ಟಕ್ಕೆ ಆಯ್ಕೆ

ಹನುಮಸಾಗರ: ಸಮೀಪದ ಕಡಿವಾಲ ಗ್ರಾಮದ ಸಂಗಮೇಶ ಗಡಾದ ಬಳ್ಳಾರಿಯಲ್ಲಿ ನಡೆದ ಪದವಿ ಕಾಲೇಜುಗಳ ಕ್ರಿಕೆಟ್ ಟೂರ್ನಾಮೆಂಟ್‌ನಲ್ಲಿ ಕಲಬುರಗಿ ವಿಭಾಗದಿಂದ ಸ್ಪರ್ಧಿಸಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಸಂಗಮೇಶ ಬಾಗಲಕೋಟೆಯ ಬಸವೇಶ್ವರ ಎಂಜಿನಿಯರಿಂಗ್ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿದ್ದು, ತಂಡ ಗೆಲ್ಲುವಲ್ಲಿ ಮಹತ್ವದ ಪಾತ್ರ ವಹಿಸಿದ್ದರು. ಮುಂದೆ ಶಿವಮೊಗ್ಗದಲ್ಲಿ ನಡೆಯಲಿರುವ ರಾಜ್ಯಮಟ್ಟದ ಕ್ರಿಕೆಟ್ ಟೂರ್ನಾಮೆಂಟ್‌ನಲ್ಲಿ ಭಾಗವಹಿಸಲಿದ್ದಾರೆ. ಸಾಧನೆಗೆ ಕ್ರೀಡಾಭಿಮಾನಿ ಶ್ರೀವಾದಿರಾಜ ಪಾಟೀಲ್, ತಂದೆ ಶಿವಯ್ಯ ಗಡಾದ, ತಾಯಿ ಗೀತಾ ಗಡಾದ ಹರ್ಷ ವ್ಯಕ್ತಪಡಿಸಿದ್ದಾರೆ.

ಇನ್ನೊಬ್ಬರ ಮೀಸಲಾತಿ ಕಸಿಯುತ್ತಿಲ್ಲ

ಶಾಸಕ ಯತ್ನಾಳ ಅಭಿಪ್ರಾಯ | ಎಂ. ಗುಡದೂರಲ್ಲಿ ಕಿತ್ತೂರು ಚೆನ್ನಮ್ಮ ವೃತ್ತ, ಪುತ್ಥಳಿ ಅನಾವರಣ



ಕುಷ್ಟಗಿ ತಾಲೂಕಿನ ಎಂ. ಗುಡದೂರು ಗ್ರಾಮದಲ್ಲಿ ವೀರರಾಣಿ ಕಿತ್ತೂರು ಚೆನ್ನಮ್ಮ ವೃತ್ತ ಹಾಗೂ ಪುತ್ಥಳಿ ಅನಾವರಣ ಕಾರ್ಯಕ್ರಮವನ್ನು ಶ್ರೀಗಳು ಹಾಗೂ ಗಣ್ಯರು ಉದ್ಘಾಟಿಸಿದರು.

• **ಕನ್ನಡಪ್ರಭ ವಾರ್ತೆ** ಕುಷ್ಟಗಿ

ನಮ್ಮ ಪಂಚಮಸಾಲಿ ಸಮಾಜದ ಮಕ್ಕಳ ಭವಿಷ್ಯಕ್ಕಾಗಿ ನಾವು ಮತ್ತೊಬ್ಬರ ಮೀಸಲಾತಿ ಕಸಿದುಕೊಳ್ಳುವ ಕೆಲಸ ಮಾಡುತ್ತಿಲ್ಲ ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಹೇಳಿದರು.

ತಾಲೂಕಿನ ಎಂ.ಗುಡದೂರು ಗ್ರಾಮದಲ್ಲಿ ನಡೆದ ವೀರರಾಣಿ ಕಿತ್ತೂರು ಚೆನ್ನಮ್ಮ ವೃತ್ತ ಹಾಗೂ ಪುತ್ಥಳಿ ಅನಾವರಣ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಕಿತ್ತೂರ ರಾಣಿ ಚೆನ್ನಮ್ಮನವರು ಎಲ್ಲ ಸಮುದಾಯದ ಸಹಕಾರದೊಂದಿಗೆ ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಆಡಳಿತ ಮಾಡಿದ್ದಾಳೆ. ಬ್ರಿಟಿಷರ ವಿರುದ್ಧ ಹೋರಾಟ ಮಾಡಿದ್ದಾಳೆ ಎಂದ ಅವರು, ಅವರಂತೆ ನಾವು ಎಲ್ಲರೊಂದಿಗೆ ಬೆರೆಯಬೇಕು ಎಂದರು.

ಈಗೀನ ರಾಜಕಾರಣಿಗಳಲ್ಲಿ ಧೈರ್ಯ ಇಲ್ಲದಂತಾಗಿದೆ. ದೇವೇಗೌಡ ಪ್ರಧಾನಿ ಇರುವ ಸಂದರ್ಭದಲ್ಲಿ ತಮ್ಮ ಸಮುದಾಯವನ್ನು ಒಬಿಸಿಗೆ ಸೇರ್ಪಡೆ ಮಾಡಿದ್ದಾರೆ. ಆದರೆ ಈಗಿರುವ ನಮ್ಮ ರಾಜಕಾರಣಿಗಳು ನಾಟಕ ಕಂಪನಿಯಂತಾಗಿವೆ, ನಮ್ಮ ಸಮಾಜದ ಮಂತ್ರಿಗಳು ಅಧಿಕಾರದ ಆಸೆಗಾಗಿ, ಖುರ್ಚಿಗಾಗಿ ಬ್ಲ್ಯಾಕ್‌ಮೇಲ್ ಮಾಡುತ್ತಿದ್ದಾರೆ ಎಂದರು.

ಕೂಡಲ ಸಂಗಮ ಶ್ರೀಗಳ ನೇತೃತ್ವದಲ್ಲಿ 2ಎ ಮೀಸಲಾತಿಗಾಗಿ ದೊಡ್ಡ ಹೋರಾಟಗಳು ನಡೆದವು. ಆದರೆ ಶ್ರೀಗಳ ಹೆಸರಿನಲ್ಲಿ, ಹೋರಾಟದ ಹೆಸರಿನಲ್ಲಿ ಕೋಟಿಗಟ್ಟಲೆ ಹಣವನ್ನು ನಮ್ಮ ಸಮಾಜದ ಹರಿಹರ ಮತ್ತು ಕೂಡಲ ಸಂಗಮ ಟ್ರಸ್ಟ್‌ನವರು ತಿಂದು ತೇಗಿದರು. ಸಮಾಜದ ಒಬ್ಬ ಶಾಸಕ ಅಧಿವೇಶನದಲ್ಲಿ 2ಎ ಮೀಸಲಾತಿ ಕೇಳುವುದನ್ನು ಬಿಟ್ಟು ಐಪಿಎಲ್ ಟಿಕೆಟ್ ಕೇಳಿದರು. ಕೂಡಲ ಸಂಗಮ ಟ್ರಸ್ಟ್‌ನ್ನು ತನ್ನ ಕುಟುಂಬಕ್ಕೆ ಸೀಮಿತಗೊಳಿಸಿಕೊಂಡರು. ಹೋರಾಟಕ್ಕೆ ಮೂರು ಕೋಟಿ ರು. ನೀಡಿದ ಸಂಡೂರು ನಾಗನಗೌಡ ಅವರನ್ನು ಹೊರಹಾಕಿದರು. ಟ್ರಸ್ಟ್‌ನವರ ಕೆಲಸದಿಂದ ಪಂಚಮಸಾಲಿ ಸಮಾಜಕ್ಕೆ ಅಪಮಾನವಾಗಿದೆ ಎಂದರು.

ಮುಂದಿನ ದಿನಗಳಲ್ಲಿ ನನಗೂ ಒಂದು ಉತ್ತಮ ಅವಕಾಶ ಬರಲಿದೆ. ಶಾಸಕ ದೊಡ್ಡನಗೌಡ ಪಾಟೀಲ ಅವರು ನನ್ನನ್ನು ಕರೆದುಕೊಂಡು ಹೋಗಲು ಬರುತ್ತಾರೆ. ಆದರೆ ಮುಖ್ಯಮಂತ್ರಿ ಅವಕಾಶ ನೀಡಿದರೆ ಮಾತ್ರ ನಾನು ಅವರೊಂದಿಗೆ ಹೋಗುತ್ತೇನೆ. ಇಲ್ಲವಾದರೆ ಯಾವ ಮಂತ್ರಿ ಸ್ಥಾನವೂ ಬೇಡ ಎಂದರು.

ಈಗಿನ ರಾಜಕಾರಣಿಗಳಲ್ಲಿ ಪ್ರಾಮಾಣಿಕತೆ ಇಲ್ಲ. ಹಣ ಖರ್ಚು ಮಾಡಿ ಟಿಕೆಟ್ ತರ್ತಾರೆ, ಮತದಾರರಿಗೆ ಹಣ ಕೊಟ್ಟು ಎಲೆಕ್ಷನ್ ಮಾಡ್ತಾರೆ, ಗೆದ್ದುಬಂದ ನಂತರದಲ್ಲಿ ವಾಪಸ್ ಖರ್ಚು ಮಾಡಿರುವ ಹಣ ತಿನ್ನುವ ಕೆಲಸ ಮಾಡುತ್ತಿದ್ದಾರೆ, ಜನರ ಸೇವೆಯನ್ನು ಮಾಡುತ್ತಿಲ್ಲ ಎಂದರು. ದೊಡ್ಡನಗೌಡ ಪಾಟೀಲ ಅವರು ಸಂಧಾನ ಮಾಡಿದರೆ ಸರಿ, ಇಲ್ಲವಾದರೆ ತಮಿಳುನಾಡಿನಲ್ಲಿ ವಿಜಯ್ ಮುಖ್ಯಮಂತ್ರಿ ಆದಂತೆ ನಾನೂ ಆಗುತ್ತೇನೆ, ಕರ್ನಾಟಕದಲ್ಲಿ ಬಿಜೆಪಿ ಮೂರನೇ ಸ್ಥಾನಕ್ಕಿಳಿಯಲಿದೆ ಎಂದರು.

ಶಾಸಕ ದೊಡ್ಡನಗೌಡ ಪಾಟೀಲ, ಮಾಜಿ ಸಂಸದ ಸಂಗಣ್ಣ ಕರಡಿ, ಮಾಜಿ ಸಚಿವ ಅಮರೇಗೌಡ ಪಾಟೀಲ ಬಯ್ಯಾಪುರ ಮಾತನಾಡಿದರು. ತುಂಗಭದ್ರಾ ಕಾಡಾ ನಿಗಮ ಅಧ್ಯಕ್ಷ ಹಸನಸಾಬ್ ದೋಟಿಹಾಳ, ಡಾ. ಬಸವರಾಜ ಕ್ಯಾವಟರ್, ವಕೀಲ ಬಿ.ಎಸ್. ಪಾಟೀಲ ಮಾತನಾಡಿದರು.

ಲಿಂಗಾಯತ ಪಂಚಮಸಾಲಿ ಪೀಠದ ಜಗದ್ಗುರು ಬಸವಜಯ ಮೃತ್ಯುಂಜಯ ಶ್ರೀಗಳು ಹಾಗೂ ನೆಲೋಗಿಯ ಸಿದ್ದಲಿಂಗ ಮಹಾಸ್ವಾಮಿಗಳು ಆಶೀವರ್ಚನ ನೀಡಿದರು. ಪಂಚಮಸಾಲಿ ಸಮಾಜದ ಅಧ್ಯಕ್ಷ ದೇವೇಂದ್ರಪ್ಪ ಬಳೂಟಗಿ ಅಧ್ಯಕ್ಷತೆ ವಹಿಸಿದ್ದರು.ಪಂಚಮಸಾಲಿಸಮಾಜದರಾಜ್ಯಾಧ್ಯಕ್ಷ ಸೋಮನಗೌಡ ಮಾಲಿಪಾಟೀಲ, ಚಂದ್ರು ನಾಲತವಾಡ, ಅಶೋಕ ಬಳೂಟಗಿ, ಬಸವರಾಜ ಹಳ್ಳೂರು, ಕೆ. ಮಹೇಶ, ಸಿಪಿಐ ವಿಶ್ವನಾಥ ಹಿರೇಗೌಡ್ರ, ಪಿಎಸ್‌ಐ ಚಂದ್ರಪ್ಪ ಇದ್ದರು.

ಅದ್ಧೂರಿ ಮೆರವಣಿಗೆ

ವಿಜಯಪುರ ಶಾಸಕ ಬಸನಗೌಡ ಯತ್ನಾಳ ಅವರನ್ನು ಪಂಚಮಸಾಲಿ ಸಮಾಜದ ಯುವಕರು ಬೈಕ್ ರ್‍ಯಾಲಿ ಮೂಲಕ ಕರೆತಂದರು. ಈ ಸಂದರ್ಭದಲ್ಲಿ ಮುಂದಿನ ಮುಖ್ಯಮಂತ್ರಿ ಯತ್ನಾಳ ಅವರಿಗೆ ಜಯವಾಗಲಿ ಎಂದು ಜೈಕಾರ ಹಾಕಿದರು.

ಬಿಎಸ್‌ವೈ ಅಭಿಮಾನೋತ್ಸವಕ್ಕೆ 50 ಸಾವಿರ ಕಾರ್ಯಕರ್ತರು



ಕುಕನೂರು ತಾಲೂಕಿನ ಇಟಗಿ ಗ್ರಾಮದ ನಿವಾಸದಲ್ಲಿ ಸುದ್ದಿಗೋಷ್ಠಿಯಲ್ಲಿ ಬಿ.ಎಸ್. ಯಡಿಯೂರಪ್ಪನವರ 50ನೇ ಅಭಿಮಾನೋತ್ಸವ ಪೋಸ್ಟರ್‌ನ್ನು ಬಿಜೆಪಿ ಜಿಲ್ಲಾಧ್ಯಕ್ಷ ನವೀನಕುಮಾರ ಗುಳಗಣ್ಣನವರ ಬುಧವಾರ ಬಿಡುಗಡೆಗೊಳಿಸಿದರು.

• **ಕನ್ನಡಪ್ರಭ ವಾರ್ತೆ** ಕುಕನೂರು

ಚಿತ್ರದುರ್ಗದಲ್ಲಿ ಮೇ 9ರಂದು ಬಿ.ಎಸ್.ಯಡಿಯೂರಪ್ಪ ಅವರ 50 ವರ್ಷದ ಜನ ಸೇವೆ ಹಿನ್ನೆಲೆಯಲ್ಲಿ ಅಭಿಮಾನೋತ್ಸವ ಬೃಹತ್ ಕಾರ್ಯಕ್ರಮ ನಡೆಯಲಿದೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ನವೀನಕುಮಾರ ಗುಳಗಣ್ಣನವರ ಹೇಳಿದರು.

ತಾಲೂಕಿನ ಇಟಗಿ ಗ್ರಾಮದ ಅವರ ನಿವಾಸದಲ್ಲಿ ಸುದ್ದಿಗೋಷ್ಠಿಯಲ್ಲಿ ಬಿ.ಎಸ್.ಯಡಿಯೂರಪ್ಪನವರ 50ನೇ ಅಭಿಮಾನೋತ್ಸವ ಪೋಸ್ಟರ್‌ಬಿಡುಗಡೆಗೊಳಿಸಿ ಮಾತನಾಡಿದ ಅವರು, ಚಿತ್ರದುರ್ಗದ ಮಾದರ ಚನ್ನಯ್ಯ ಗುರುಪೀಠದ ಪಕ್ಕದಲ್ಲಿ ಮೇ 8 ರಂದು ಸಂಜೆ 6 ಗಂಟೆಗೆ ವಿವಿಧ ಕಲಾ ತಂಡಗಳಿಂದ ಭವ್ಯ ಮೆರವಣಿಗೆ ಮೂಲಕ ಸ್ವಾಗತಿಸಲಾಗುವುದು. ಮೇ 9 ರಂದು ಬೃಹತ್ ಕಾರ್ಯಕ್ರಮ ಬೆಳಗ್ಗೆ 11 ಗಂಟೆಗೆ ನಡೆಯಲಿದ್ದು, ಕೇಂದ್ರ ಗೃಹ ಸಚಿವ ಅಮೀತ್ ಶಾ ಆಗಮಿಸಲಿದ್ದು. ರಾಜ್ಯದ ಸಾವಿರಕ್ಕೂ ಅಧಿಕ ಮಠಾಧೀಶರು ಭಾಗವಹಿಸಲಿದ್ದಾರೆ. ಜಿಲ್ಲೆಯಿಂದ 40 ರಿಂದ 50 ಸಾವಿರ ಕಾರ್ಯಕರ್ತರು ಆಗಮಿಸಲಿದ್ದಾರೆ, ಬಸ್ ವ್ಯವಸ್ಥೆ ಕಲ್ಪಿಸಲಾಗುವುದು. ಇನ್ನೂ ಸ್ವಯಂ ಪ್ರೇರಣೆಯಿಂದ ಸಾಕಷ್ಟು ಅಭಿಮಾನಿಗಳು ಆಗಮಿಸಲಿದ್ದಾರೆ ಎಂದರು.

ಕ್ಷೇತ್ರದಲ್ಲಿ ಕಟ್ಟಡ ನಿರ್ಮಾಣ ಮಾಡಿದ ನಂತರ ಅದಕ್ಕೆ ತಕ್ಕಂತೆ ಸೌಲಭ್ಯ ಒದಗಿಸುವುದು ಮುಖ್ಯವಾಗಿದೆ. ಇಂಜಿನಿಯರ್‌ಕಾಲೇಜು ಪ್ರಾರಂಭಗೊಂಡು 4 ರಿಂದ 5 ಬ್ಯಾಚ್ ಹೊರಗಡೆ ಹೋಗಿದೆ. ಇದುವರೆಗೂ ಸರಿಯಾಗಿ ಉಪನ್ಯಾಸಕರನ್ನು ಒದಗಿಸಿಲ್ಲ. ಇದರಿಂದ ವಿದ್ಯಾರ್ಥಿಗಳಿಗೆ ಸಾಕಷ್ಟು ಅನ್ಯಾಯವಾಗುತ್ತದೆ. ಕಲಿತ ಹೊರಗಡೆ ಹೋದ ವಿದ್ಯಾರ್ಥಿಗಳಿಗೆ ಉದ್ಯೋಗ ದೊರೆಯುತ್ತಿಲ್ಲ. ಕುಡಿವ ನೀರಿನ ಸಮಸ್ಯೆ ಕ್ಷೇತ್ರದಲ್ಲಿ ಸಾಕಷ್ಟು ಇದೆ. ಕೇವಲ ಹಣದ ದುರ್ಬಳಕೆಯಾಗುತ್ತದೆ. ಇನ್ನೂ ತಾಲೂಕು ಕೇಂದ್ರದಲ್ಲಿ ನ್ಯಾಯಾಲಯ, ತಹಸೀಲ್ದಾರ್ ಕಚೇರಿ ನಿರ್ಮಾಣ ಮಾಡುವುದು ಅಗತ್ಯವಿದೆ. ಆದರೆ, ಮುಜರಾಯಿ ಇಲಾಖೆಯ ಭೂಮಿಯಲ್ಲಿ ನಿರ್ಮಾಣ ಮಾಡುವುದು ಎಷ್ಟು ಸರಿ? ಪ್ರತ್ಯೇಕ ಭೂಮಿ ಖರೀದಿ ನಿರ್ಮಾಣ ಮಾಡಬಹುದು. ಈ ಹಿಂದೆ ತಹಸೀಲ್ದಾರ್‌ಕಚೇರಿ ನಿರ್ಮಾಣಕ್ಕೆ ಭೂಮಿ ಗುರುತಿಸಲಾಗಿತ್ತು. ಈ ಹಿಂದೆ ಗುದ್ನೇಶ್ವರ ದೇವಸ್ಥಾನದ ಜಾಗದಲ್ಲಿ ಹಲವು ಕಟ್ಟಡ ನಿರ್ಮಾಣ ಮಾಡಲಾಗಿದೆ. ಉಳಿದ ಜಾಗ ದೇವಸ್ಥಾನದ ಅಭಿವೃದ್ಧಿಗೆ ಅಗತ್ಯವಿದ್ದು, ಅದರಲ್ಲೂ ಸರ್ಕಾರಿ ಕಚೇರಿ ನಿರ್ಮಾಣ ಮಾಡುವುದು ಸರಿಯಲ್ಲ. ಸಿಎಂ ಆರ್ಥಿಕ ಸಲಹೆಗಾರ ಬಸವರಾಜ ರಾಯರಡ್ಡಿ ಯಲಬುರ್ಗಾದಲ್ಲಿ ಇಡ್ಲಿ, ವಡ್ಡಾ ಸಿಗುವುದಿಲ್ಲ ಎಂದು ಈ ಹಿಂದೆಯೇ ಹೇಳಿದ್ದಾರೆ. ಆದರೆ, ಅಭಿವೃದ್ಧಿ ಪಡಿಸಲಾಗಿದೆ ಎಂದು ಹೇಳುತ್ತಾರೆ ಎಂದರು.

ಜಿಲ್ಲಾಎಸ್ಟಿಮೋರ್ಚಾಅಧ್ಯಕ್ಷವಿಜಯಕುಮಾರ ತಾಳಕೇರಿ, ರೈತ ಮೋರ್ಚಾ ಉಪಾಧ್ಯಕ್ಷ ವಿರುಪಾಕ್ಷಪ್ಪ ಹುಳ್ಳಿ, ಜಿಲ್ಲಾ ಬಿಜೆಪಿ ವಕ್ತಾರ ಸೋಮಶೇಖರಗೌಡ ಜೆ. ಸೊಂಪೂರ ಇದ್ದರು.

ಅಕ್ರಮ ಸಾರಾಯಿ ಮಾರಾಟ ಬಂದ್ ಮಾಡಿ

• **ಕನ್ನಡಪ್ರಭ ವಾರ್ತೆ** ಕುಕನೂರು

ತಾಲೂಕಿನ ಸಿದ್ನೆಕೊಪ್ಪ ಗ್ರಾಮದಲ್ಲಿ ಅಕ್ರಮ ಮದ್ಯ ಮಾರಾಟಕ್ಕೆ ಕಡಿವಾಣ ಹಾಕಬೇಕು ಎಂದು ಗ್ರಾಮದ ಮಹಿಳೆಯರು ತಹಸೀಲ್ದಾರ್‌ಕಚೇರಿಯಲ್ಲಿ ತಹಸೀಲ್ದಾರರಿಗೆ ಮನವಿ ಸಲ್ಲಿಸಿದರು. ಗ್ರೇಡ್ 2 ತಹಸೀಲ್ದಾರ್‌ಮುರುಳಿಧರರಾವ್ ಕುಲಕರ್ಣಿ ಮನವಿ ಸ್ವೀಕರಿಸಿದರು.

ವಿದ್ಯಾರ್ಥಿಗಳೂ ಸಾರಾಯಿ ಚಟಕ್ಕೆ ಬಲಿಯಾಗುತ್ತಿದ್ದಾರೆ. ಇದನ್ನು ತಡೆಯಬೇಕಾದ ಅಬಕಾರಿ ಇಲಾಖೆಯು ಕಣ್ಣಿದ್ದೂ ಕುರುಡರಂತೆ ವರ್ತಿಸುತ್ತಿದೆ. ಸಾರಾಯಿ ಅನೇಕ ಕುಟುಂಬಗಳನ್ನು ಬೀದಿಗೆ ತರುತ್ತಿದೆ. ಕುಡಿದು ಬಂದ ಪುರುಷರು ಕೊಡುವ ಹಿಂಸೆಗೆ ಮನೆಯಲ್ಲಿರುವ ಹೆಣ್ಣು ಮಕ್ಕಳು ಕಣ್ಣೀರು ಹಾಕುವ ಪ್ರಸಂಗಗಳು ನಡೆಯುತ್ತಿವೆ. ಮಕ್ಕಳ ವಿದ್ಯಾಭ್ಯಾಸಕ್ಕೆ ತೊಂದರೆಯಾಗುತ್ತಿದೆ. ಚಿಕ್ಕ-ಚಿಕ್ಕ ವಿದ್ಯಾರ್ಥಿಗಳು ಈ ಹೆಂಡದ ಚಟಕ್ಕೆ ದಾಸರಾಗುತ್ತಿರುವ ವಿದ್ಯಾಮಾನ ನಡೆಯುತ್ತಿರುವುದು ದುರ್ದೈವದ ಸಂಗತಿ. ಗ್ರಾಮದ ವ್ಯಾಪ್ತಿಯಲ್ಲಿ ಇಂದಿನಿಂದಲೇ ಅಕ್ರಮ ಸಾರಾಯಿ ಮಾರಾಟ ನಿಲ್ಲಬೇಕು. ಅಕ್ರಮ ಸಾರಾಯಿ ಮಾರಾಟಗಾರರನ್ನು ಗುರುತಿಸಿ ಕೂಡಲೇ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ಉಗ್ರ ಪ್ರತಿಭಟನೆ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

ಸಿದ್ನೆಕೊಪ್ಪ ಗ್ರಾಮದ ಮಹಿಳೆಯರಾದ ಸಿದ್ದಮ್ಮ, ವಿಶಾಲಾಕ್ಷಿ, ಸುವರ್ಣ, ಸಿದ್ದಮ್ಮ, ಚೆನ್ನಮ್ಮ, ಅಂದಮ್ಮ, ಲಕ್ಷ್ಮಮ್ಮ, ದೇವಕ್ಕ ಇತರರು ಇದ್ದರು.



ಕುಕನೂರು ತಾಲೂಕಿನ ಸಿದ್ನೆಕೊಪ್ಪ ಗ್ರಾಮದಲ್ಲಿ ಅಕ್ರಮ ಮದ್ಯ ಮಾರಾಟಕ್ಕೆ ಕಡಿವಾಣ ಹಾಕಬೇಕು ಎಂದು ಮಹಿಳೆಯರು ತಹಸೀಲ್ದಾರರಿಗೆ ಮನವಿ ಸಲ್ಲಿಸಿದರು. ಗ್ರೇಡ್ 2 ತಹಸೀಲ್ದಾರ್‌ಮುರುಳಿಧರರಾವ್ ಕುಲಕರ್ಣಿ ಮನವಿ ಸ್ವೀಕರಿಸಿದರು.

ಮುಂಗಾರು-ಹಿಂಗಾರು ತಕಟ ಮಸಾನ!, ಅನ್ನದಾತರ ಸಂತಸ

• **ಕನ್ನಡಪ್ರಭ ವಾರ್ತೆ** ಹನುಮಸಾಗರ

ಸಮೀಪದ ಬೆಟ್ಟದ ಮೇಲಿರುವ ಐತಿಹಾಸಿಕ ಕ್ಷೇತ್ರವಾದ ಚಂದಾಲಿಂಗೇಶ್ವರ ದೇಗುಲದಲ್ಲಿ ವಗ್ಗಯ್ಯನ ನುಡಿ ಕೇಳಿದ ರೈತರು ಹಾಗೂ ಭಕ್ತರು ಖುಷಿಯಿಂದ ಜಾತ್ರೆ ಮುಗಿಸಿ ತಮ್ಮ ಗ್ರಾಮಗಳಿಗೆ ತೆರಳಿದರು.

ಚಂದಾಲಿಂಗೇಶ್ವರ ದೇಗುಲದಲ್ಲಿ ವಗ್ಗಯ್ಯನ ನುಡಿ ಕೇಳುವುದಕ್ಕಾಗಿಯೇ ಸಾವಿರಾರು ಸಂಖ್ಯೆಯಲ್ಲಿ ರೈತರು ಹಾಗೂ ಭಕ್ತರು ಸೇರಿದ್ದರು. ಅಲ್ಲಿಯೇ ಸಮೀಪದಲ್ಲಿರುವ ಕೂಗು ಬಸವಣ್ಣನಲ್ಲಿಗೆ ಹೋಗಿ ನುಡಿ ಕೇಳಿ ಬಂದ ವಗ್ಗಯ್ಯನವರು, ಪರಂಪರೆಯಂತೆ ನುಡಿ ಹೇಳುವ ಗಿಡಕ್ಕೆ ನಾನಾ ರೀತಿಯ ಧಾರ್ಮಿಕ ಪೂಜೆಯನ್ನು ನೆರವೇರಿಸಿ ಸರಸರನೇ ಮರವೇರಿ ‘ಮುಂಗಾರು- ಹಿಂಗಾರು ತಕಟ ಮಸಾನ'''' ಎಂದು ಹೇಳಿ ರೈತರಿಗೆ ಸಂತಸ ಮೂಡಿಸಿದರು. ಈ ಬಾರಿ ಮುಂಗಾರು ಹಾಗೂ ಹಿಂಗಾರು ಮಳೆ ಸರಿ ಸಮನವಾಗಿ ಬೆಳೆ ಬಂದರೂ ಹಿಂಗಾರಿಗಿಂತ ಮುಂಗಾರು ಬೆಳೆ ಉತ್ತಮ ಫಲ ತರಲಿದೆ ಎಂಬ ಅರ್ಥ ಎಂದು ಹಿರಿಯರು ತಿಳಿಸಿದರು. ಈ ನುಡಿ ಕೇಳುವುದಕ್ಕಾಗಿ ಸಾವಿರಾರು ಸಂಖ್ಯೆಯಲ್ಲಿ ನಿಂತಿದ್ದ ಜನರು ನುಡಿ ಹೊರಬರುವ ಸಂದರ್ಭದಲ್ಲಿ ಸಂಪೂರ್ಣ ನಿಶ್ಯಬ್ದದಿಂದ ಕೂಡಿತ್ತು. ಬಳಿಕ ಕಬ್ಬಿಣ ಸರಪಳಿ ಹರಿಯುವ ಪವಾಡ ಜರುಗಿತು. ಜಾತ್ರೆಯ ನಿಮಿತ್ತ ನಾನಾ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು. ಹನುಮಸಾಗರ, ಮನ್ನೇರಾಳ, ಬೀಳಗಿ, ಗುಡೂರ, ದ ಮ್ಮೂರ, ಸೇಬಿನಕಟ್ಟಿ, ಕಬ್ಬರಗಿ, ಹೂಲಗೇರಿ, ಯರ ಗೇರಾ ಗ್ರಾಮಗಳ ಭಕ್ತರು ಟಂಟಂ, ಟ್ರ್ಯಾಕ್ಟರ್, ಜೀಪು, ದ್ವಿಚಕ್ರ ವಾಹನ, ಕಾಲ್ನಡಿಗೆಗಳ ಮೂಲಕ ದೇಗುಲಕ್ಕೆ ಆಗಮಿಸಿದ್ದರು.

ಅದ್ಧೂರಿಯಾಗಿ ನಡೆದ ದುರ್ಗಾದೇವಿ, ಮಲೆಯಮ್ಮ ದೇವಿ ಜಾತ್ರೆ

ಕುಕನೂರು: ತಾಲೂಕಿನ ಶಿರೂರು ಗ್ರಾಮದ ಶ್ರೀದುರ್ಗಾದೇವಿ ಹಾಗೂ ಶ್ರೀಮಲೆಯಮ್ಮ ದೇವಿಯ ಜಾತ್ರಾ ಮಹೋತ್ಸವ ಅತ್ಯಂತ ಸಡಗರ-ಸಂಭ್ರಮದಿಂದ ಜರುಗಿತು.

ಗ್ರಾಮದ ಹಿರಿಯರಾದ ಶೇಖರಗೌಡ ಮಾಲಿಪಾಟೀಲ್ ಅವರ ಕುಟುಂಬ ಹಾಗೂ ರಾಜೇಂದ್ರ ಗೌಡ ಪೊಲೀಸ್ ಪಾಟೀಲ್ ಕುಟುಂಬದಿಂದ ದೇವಿಗೆ ಮಂಗಳ ದ್ರವ್ಯಗಳೊಂದಿಗೆ ಮಾಲೆ ತರಲಾಯಿತು. ದೇವಿಯು ಪಲ್ಲಕ್ಕಿಯಲ್ಲಿ ಕುಳಿತು ಗಂಗಾಪೂಜೆಗೆ ಹೋಗುವ ವಿಶೇಷ ಕಾರ್ಯಕ್ರಮ ನಡೆಯಿತು. ಈ ವಿಶಿಷ್ಟ ಆಚರಣೆಯ ನಂತರ ದೇವಿಯ ಅಗ್ನಿ ಪ್ರವೇಶದ ದೃಶ್ಯವು ಭಕ್ತರಲ್ಲಿ ರೋಮಾಂಚನ ಮೂಡಿಸಿತು. ಭಕ್ತರು ದೇವಿಯ ನಾಮಸ್ಮರಣೆ ಮಾಡುತ್ತಾ ಅಗ್ನಿ ಪ್ರವೇಶಿಸಿದರು. ಗ್ರಾಮಸ್ಥರು ಹಾಗೂ ಭಕ್ತಾದಿಗಳಿದ್ದರು.



ಕುಕನೂರು ತಾಲೂಕಿನ ಶಿರೂರು ಗ್ರಾಮದ ಶ್ರೀದುರ್ಗಾದೇವಿ ಹಾಗೂ ಶ್ರೀಮಲೆಯಮ್ಮ ದೇವಿಯ ಜಾತ್ರಾಮಹೋತ್ಸವ ಅತ್ಯಂತ ಸಡಗರ-ಸಂಭ್ರಮದಿಂದ ಜರುಗಿತು.

ಅಡಿಗಲ್ಲು... ಶಾಸಕ ಕೆ. ರಾಘವೇಂದ್ರ ಹಿಟ್ನಾಳ ಹೇಳಿಕೆ, ಹಿಟ್ನಾಳದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಅಡಿಗಲ್ಲು

₹72 ಕೋಟಿ ವೆಚ್ಚದಲ್ಲಿ ಹುಲಿಗೆಮ್ಮ ದೇವಸ್ಥಾನದ ಅಭಿವೃದ್ಧಿ ಕಾಮಗಾರಿಗಳಿಗೆ ಶೀಘ್ರದಲ್ಲಿ ಟೆಂಡರ್

• **ಕನ್ನಡಪ್ರಭ ವಾರ್ತೆ** ಕೊಪ್ಪಳ

ನಮ್ಮ ಭಾಗದ ಪ್ರಸಿದ್ಧ ದೇವಸ್ಥಾನವಾಗಿರುವ ಹುಲಗಿಯ ಶ್ರೀ ಹುಲಿಗೆಮ್ಮದೇವಿಯ ದೇವಸ್ಥಾನ ಅಭಿವೃದ್ಧಿಪಡಿಸಲು ಹಲವು ಯೋಜನೆಗಳನ್ನು ರೂಪಿಸಿದ್ದೇವೆ.ಈಗಾಗಲೇಹಲವುಕಾಮಗಾರಿಗಳನ್ನು ಕೈಗೊಂಡಿದ್ದು, ಈಗಾಗಲೇ ಹಲವು ಅಭಿವೃದ್ಧಿ ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದು ಶಾಸಕ ಕೆ. ರಾಘವೇಂದ್ರ ಹಿಟ್ನಾಳ್ ಹೇಳಿದರು.

ಹಿಟ್ನಾಳ ಜಿಪಂ ಕ್ಷೇತ್ರ ವ್ಯಾಪ್ತಿಯ ಹಿಟ್ನಾಳ, ಕಂಪಸಾಗರ, ಹುಲಿಗಿ, ಮುನಿರಾಬಾದ್ ಆರ್. ಎಸ್., ಹಳೇಲಿಂಗಾಪುರ, ಹೊಸಲಿಂಗಪುರ, ಮಟ್ಟಿ, ಮುದ್ಲಾಪುರ, ಹೊಳೆಮುದ್ಲಾಪುರ, ಮುನಿರಾಬಾದ್ ಡ್ಯಾಮ್ ಹಾಗೂ ಹೊಸಳ್ಳಿ ಗ್ರಾಮದಲ್ಲಿ ಸುಮಾರು ₹12.38 ಕೋಟಿ ವೆಚ್ಚದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಅಡಿಗಲ್ಲು ನೆರವೇರಿಸಿ, ಹುಲಗಿಯಲ್ಲಿಮಾತನಾಡಿದಶಾಸಕಕೆ. ರಾಘವೇಂದ್ರ ಹಿಟ್ನಾಳ್, ನಿನ್ನೆ ಬೆಂಗಳೂರಿನಲ್ಲಿ ಸಾರಿಗೆ ಮತ್ತು ಮುಜರಾಯಿ ಇಲಾಖೆಯ ಸಚಿವ ರಾಮಲಿಂಗಾರೆಡ್ಡಿ ಅವರನ್ನು ಭೇಟಿಯಾಗಿ ಶ್ರೀ ಹುಲಿಗೆಮ್ಮ ದೇವಿಯ ಜಾತ್ರೆಗೆ ಆಹ್ವಾನಿಸಿದ್ದೇನೆ. ಈ ಸಂದರ್ಭದಲ್ಲಿ ಇನ್ನೂ ₹72 ಕೋಟಿ ವೆಚ್ಚದ ಕಾಮಗಾರಿಗಳಿಗೆ ಶೀಘ್ರದಲ್ಲಿ ಟೆಂಡರ್‌ಕರೆಯಲು ಅಧಿಕಾರಿಗಳಿಗೆ ಸೂಚನೆ ನೀಡಬೇಕು ಎಂದು ಸಚಿವರ ಗಮನಕ್ಕೆ ತಂದಿದ್ದೇನೆ. ಶ್ರೀ ಹುಲಿಗೆಮ್ಮದೇವಿ ದೇವಸ್ಥಾನಕ್ಕೆ ಹಿಟ್ನಾಳ ಕ್ರಾಸ್ ಮೂಲಕ ಹೆಚ್ಚಿನ ಭಕ್ತರು ಸಂಚಾರ ಮಾಡುತ್ತಿರುವುದರಿಂದ ಈಗಾಗಲೇ ಆ ರಸ್ತೆಗೆ ₹4.20 ಕೋಟಿ ಅನುದಾನ ನೀಡಿದ್ದು, ಈಗಾಗಲೇ ರಸ್ತೆ ಅಭಿವೃದ್ಧಿ ಕಾಮಗಾರಿ ಪ್ರಗತಿಯಲ್ಲಿದೆ ಎಂದರು.

ಕರ್ನಾಟಕ ಪಬ್ಲಿಕ್ ಶಾಲೆಗಳಿಗೆ ಅಡಿಗಲ್ಲು: ಕೊಪ್ಪಳ ತಾಲೂಕಿನ ಹಿಟ್ನಾಳ ಗ್ರಾಮದಲ್ಲಿ ₹4 ಕೋಟಿ ವೆಚ್ಚದಲ್ಲಿ ಹಾಗೂ ಹೊಸಹಳ್ಳಿ ಗ್ರಾಮದಲ್ಲಿ ₹4 ಕೋಟಿ ವೆಚ್ಚದಲ್ಲಿ ಸರ್ಕಾರಿ ಪ್ರಾಥಮಿಕ /ಪ್ರೌಢಶಾಲೆಯನ್ನು ಕರ್ನಾಟಕ ಪಬ್ಲಿಕ್ ಶಾಲೆಗಳಾಗಿ ಪರಿವರ್ತಿಸಿ ಮೂಲಭೂತ ಸೌಕರ್ಯ ಒದಗಿಸುವ ಕಾಮಗಾರಿಗೆ ಶಾಸಕ ಕೆ. ರಾಘವೇಂದ್ರ ಹಿಟ್ನಾಳ ಅಡಿಗಲ್ಲು ನೆರವೇರಿಸಿದರು.

ಹಿಟ್ನಾಳ ಗ್ರಾಮದಲ್ಲಿ ₹25 ಲಕ್ಷ ವೆಚ್ಚದಲ್ಲಿ ಭಾವಸಾರ ಕ್ಷತ್ರಿಯ ಹಾಗೂ ₹25 ಲಕ್ಷ ವೆಚ್ಚದ ಆರ್ಯವೈಶ್ಯ ಸಮಾಜದ ಸಮುದಾಯ ಭವನ, ಹುಲಿಗಿಯಲ್ಲಿ ₹25 ಲಕ್ಷ ವೆಚ್ಚದಲ್ಲಿ ಭೋವಿ ಸಮಾಜದ, ₹25 ಲಕ್ಷ ವೆಚ್ಚದಲ್ಲಿ ಸವಿತಾ ಸಮಾಜದ ಹಾಗೂ ₹20 ಲಕ್ಷ ವೆಚ್ಚದಲ್ಲಿ ವಾಲ್ಮೀಕಿ ಸಮಾಜದ ಸಮುದಾಯ ಭವನ ನಿರ್ಮಾಣದ ಕಾಮಗಾರಿಗೆ ಅಡಿಗಲ್ಲು ನೆರವೇರಿಸಿದರು.

ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಶ್ರೀನಿವಾಸ್ ಗುಪ್ತಾ, ವಿ.ಆರ್. ಪಾಟೀಲ್, ಜಿಪಂ ಮಾಜಿ ಸದಸ್ಯ ಗವಿಸಿದ್ದಪ್ಪ ಕರಡಿ, ಗ್ಯಾರಂಟಿ ಸಮಿತಿ ಅಧ್ಯಕ್ಷ ಬಾಲಚಂದ್ರನ್ ಮುನಿರಾಬಾದ್, ಕೆ.ಎಂ. ಸೈಯದ್, ವಿಶ್ವನಾಥ ರಾಜೂರು, ಫಾಲಾಕ್ಷಪ್ಪ ಗುಂಗಾಡಿ, ಯಂಕಪ್ಪ ಹೊಸಳ್ಳಿ, ಚಿನ್ನಿ ಆರ್.ಎಸ್., ಈರಣ್ಣ ಹುಲಿಗಿ, ಧರ್ಮಣ್ಣ ಕಂಪಸಾಗರ, ಪ್ರಶಾಂತ ಗೌಡ್ರು, ನಾರಾಯಣ ಬಿಲಂಕರ್, ವೆಂಕಟೇಶ್ ಹಿಟ್ನಾಳ, ಸೋಮಶೇಖರ ಹಿಟ್ನಾಳ, ಹನಮಂತಪ್ಪ ಹ್ಯಾಟಿ, ಶರಣಪ್ಪ ಉಪ್ಪಾರ್, ಮಾರುತಿ ಬಗನಾಳ, ರಾಮಮೂರ್ತಿ ಮುನಿರಾಬಾದ್, ಬಸಣ್ಣ ಬೇವೂರು, ಅಶೋಕ್ ಹಿಟ್ನಾಳ, ಹನುಮಂತ ಗಿಡ್ಡಾಲಿ, ತಹಸೀಲ್ದಾರ್‌ಬಸವರಾಜ, ಅಕ್ಬರ್ ಪಲ್ಟಾನ್ ಸೇರಿದಂತೆ ಇತರರು ಉಪಸ್ಥಿತರಿದ್ದರು.



ಕೊಪ್ಪಳ ತಾಲೂಕಿನ ಹುಲಗಿ ಗ್ರಾಮದಲ್ಲಿ ಬುಧವಾರ ಶಾಸಕ ಕೆ. ರಾಘವೇಂದ್ರ ಹಿಟ್ನಾಳ ₹1.25 ಕೋಟಿ ವೆಚ್ಚದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಅಡಿಗಲ್ಲು ನೆರವೇರಿಸಿದರು.

ಗ್ರಾಮೀಣ ಕ್ರೀಡಾ ಪ್ರತಿಭೆಗಳಿಗೆ ಬೇಕಿದೆ ಪ್ರೋತ್ಸಾಹ: ಯಲಬುರ್ಗಿ

■ ಯುವಕರು ದುಶ್ಚಟಗಳಿಗೆ ಬಲಿಯಾಗದೆ ಉತ್ತಮ ಸಮಾಜಮುಖಿ ಕಾರ್ಯಗಳಲ್ಲಿ ಪಾಲ್ಗೊಳ್ಳಬೇಕು

• **ಕನ್ನಡಪ್ರಭ ವಾರ್ತೆ** ಕುಷ್ಟಗಿ

ಗ್ರಾಮೀಣ ಮಟ್ಟದ ಕ್ರೀಡಾಪಟುಗಳಿಗೆ ಪ್ರೋತ್ಸಾಹಿಸುವ ಕಾರ್ಯ ಮಾಡಿದಾಗ ಮಾತ್ರ ರಾಜ್ಯ, ರಾಷ್ಟ್ರಮಟ್ಟದಲ್ಲಿ ಸಾಧನೆಗೈಯಲು ಸಾಧ್ಯವಾಗಲಿದೆ ಎಂದು ಕಾಂಗ್ರೆಸ್ ಯುವ ಮುಖಂಡ ಅಬ್ದುಲ್ ಖಾದರ ಯಲಬುರ್ಗಿ ಹೇಳಿದರು.

ತಾಲೂಕಿನ ದೋಟಿಹಾಳ ಗ್ರಾಮದ ಸರ್ಕಾರಿ ಪ್ರೌಢಶಾಲೆಯ ಆವರಣದಲ್ಲಿ ಶ್ರೀ ಮಣಿಕಂಠ ಕ್ರಿಕೆಟ್ ಕ್ಲಬ್ ವತಿಯಿಂದ ನಡೆದ ಹಾರ್ಡ್ ಟೆನ್ನಿಸ್ ಒಪನ್ ಕ್ರಿಕೆಟ್ ಟೂರ್ನಾಮೆಂಟ್ ಉದ್ಘಾಟಿಸಿ ಅವರು ಮಾತನಾಡಿದರು. ಕ್ರೀಡೆ ದೈಹಿಕ ಆರೋಗ್ಯದ ಜತೆಗೆ ಶಿಸ್ತು ಹಾಗೂ ನಾಯಕತ್ವ ಗುಣಗಳನ್ನು ಬೆಳೆಸುತ್ತದೆ ಎಂದ ಅವರು, ಯುವಕರು ದುಶ್ಚಟಗಳಿಗೆ ಬಲಿಯಾಗದೆ ಉತ್ತಮ ಸಮಾಜಮುಖಿ ಕಾರ್ಯಗಳಲ್ಲಿ ಪಾಲ್ಗೊಳ್ಳಬೇಕು ಎಂದು ಹೇಳಿದರು. ಎಪಿಎಂಸಿ ಮಾಜಿ ನಿರ್ದೇಶಕ ಹನುಮಂತರಾವ್ ದೇಸಾಯಿ ಮಾತನಾಡಿ, ಕ್ರೀಡೆ ಯುವಕರಲ್ಲಿ ಒಗ್ಗಟ್ಟು, ಸಹನೆ, ಸ್ಪರ್ಧಾತ್ಮಕ ಮನೋಭಾವ ಬೆಳೆಸುವ ಪ್ರಮುಖ ಸಾಧನ ವಾಗಿದೆ. ಯುವಕರು ಮೊಬೈಲ್‌ಗೆ ಸೀಮಿತವಾ ಗದೇ ಕ್ರೀಡಾಕ್ಷೇತ್ರದಲ್ಲಿ ತೊಡಗಿಸಿಕೊಳ್ಳಬೇಕು ಎಂದು ಕರೆ ನೀಡಿದರು. ಶ್ಯಾಮೀದಸಾಬ ಮುಜಾ ವರ, ರಾಘವೇಂದ್ರ ಕುಂಬಾರ, ಉಮೇಶ ಮಡಿ ವಾಳರ, ಮಲ್ಲಿಕಾರ್ಜುನ ಅಂಗಡಿ, ಶುಖಮುನಿ, ಶ್ಯಾಹೀದ, ಪ್ರಶಾಂತ ಕುಮಾರ, ವೀರೇಶ, ಶಿವುಕುಮಾರ, ಅಮರೇಶ, ವಿಜಯಕುಮಾರ ಇದ್ದರು.

ವಿಜೃಂಭಣೆಯ ಬುಡ್ಡಮ್ಮ ದೇವಿ ರಥೋತ್ಸವ

• **ಕನ್ನಡಪ್ರಭ ವಾರ್ತೆ** ಕೊಪ್ಪಳ

ತಾಲೂಕಿನ ಮೈನಹಳ್ಳಿ ಗ್ರಾಮದಲ್ಲಿ ಶ್ರೀ ಶಿವಶರಣೆ ಬುಡ್ಡಮ್ಮ ದೇವಿಯ ಜಾತ್ರಾ ಮಹೋತ್ಸವದ ಅಂಗವಾಗಿ ಮಹಾರಥೋತ್ಸವ ಸೋಮವಾರ ಸಂಜೆ ವಿಜೃಂಭಣೆಯಿಂದ ನಡೆಯಿತು.

ಪಾದಗಟ್ಟೆಯಿಂದ ಮಹಾರಥೋತ್ಸವಕ್ಕೆ ಚಾಲನೆ ನೀಡುತ್ತಿದ್ದಂತೆ ಜಯಘೋಷ ಕೂಗಿದ ಭಕ್ತರು, ಉತ್ತತ್ತಿ, ಬಾಳೆ ಹಣ್ಣು ಎಸೆದು ಪುನೀತರಾದರು.

ಬೆಳಗ್ಗಿನಿಂದಲೇ ದೇವಾಲಯದಲ್ಲಿ ವಿಶೇಷ ಪೂಜೆಗಳು, ಅಭಿಷೇಕ ಮತ್ತು ಅಲಂಕಾರ ಕಾರ್ಯಕ್ರಮಗಳು ನೆರವೇರಿದವು. ಆನಂತರ ಭಕ್ತರ ಜಯಘೋಷಗಳ ಮಧ್ಯೆ ದೇವಿಯ ಉತ್ಸವ ಮೂರ್ತಿಯನ್ನು ಭವ್ಯರಥದಲ್ಲಿ ಏರಿಸಿ ಗ್ರಾಮ ಸುತ್ತಲೂ ಮೆರವಣಿಗೆ ನಡೆಸಲಾಯಿತು.

ರಥೋತ್ಸವದ ಸಂದರ್ಭದಲ್ಲಿ ಗ್ರಾಮದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿದ್ದು, ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ಭಜನಾ ಮಂಡಳಿಗಳ ಗಾಯನವು ಭಕ್ತರ ಮನಸೆಳೆದವು. ಭಕ್ತರಿಗೆ ಅನ್ನಸಂತರ್ಪಣೆ ಸಾಂಗವಾಗಿ ನಡೆಯಿತು.

ಸಾವಿರಾರು ಭಕ್ತರು ದೇವಿಯ ದರ್ಶನ ಪಡೆದು ಹರಕೆ ತೀರಿಸಿಕೊಂಡರು. ಗ್ರಾಮದಲ್ಲಿ ಸಂಭ್ರಮದ ವಾತಾವರಣ ನಿರ್ಮಾಣವಾಗಿತ್ತು.

ರಕ್ತದಾನ ಶಿಬಿರದಲ್ಲಿ ಹಲವಾರು ಯುವಕರು ಸ್ವಯಂಪ್ರೇರಿತರಾಗಿ ರಕ್ತದಾನ ಮಾಡಿ ಮಾನವೀಯತೆ ಮೆರೆದರು. ಇನ್ನೂ ರಾತ್ರಿ ವೇಳೆಯಲ್ಲಿ ಎಸ್.ಎ. ತೋಟದವರ ವಿರಚಿತ ಹಾಗೂ ನಿರ್ದೇಶನದಲ್ಲಿ ''ಕೂಡಿಬಂತು ಕಂಕಣ ಬಲ'' ಎಂಬ ಸಾಮಾಜಿಕ ನಾಟಕವನ್ನು ಆಯೋಜಿಸಲಾಗಿತ್ತು.

ಪತಾಕೆ ಸವಾಲು: ಶ್ರೀ ಬುಡ್ಡಮ್ಮದೇವಿಯ ಪತಾಕೆ ಸವಾಲು ಪ್ರಸಕ್ತ ವರ್ಷ ₹4,05,101ಕ್ಕೆ ಆಯಿತು. ಮುಸ್ಟೆಕೊಪ್ಪ ಗ್ರಾಮದ ಹೊನ್ನಿಕೇರಪ್ಪ ಅವರು ಸವಾಲು ಕೂಗಿ, ಪಡೆದರು.

ಉಡಿ ತುಂಬುವ ಕಾರ್ಯಕ್ರಮಕ್ಕೆ ತೆರೆ

ಹನುಮಸಾಗರ: ಪಟ್ಟಣದ ಗ್ರಾಮ ದೇವತೆ ದ್ಯಾಮಾಂಭಿಕ ದೇವಸ್ಥಾನದಲ್ಲಿ ಉಡಿ ತುಂಬುವ ಕಾರ್ಯಕ್ರಮ ವಿಜೃಂಭಣೆಯಿಂದ ಆಚರಿಸಲಾಯಿತು.

ಮುತ್ತೈದೆಯರು ಪಟ್ಟಣದ ಪೊಲೀಸ್ ಪಾಟೀಲ್ ಮನೆತನದಿಂದ ಉಡಿ ಸಾಮಗ್ರಿ ತೆಗೆದುಕೊಂಡು ಆಗಮಿಸಿ ಐದು ಪಟ್ಟಣದ ಎಲ್ಲ ದೇವಸ್ಥಾನಗಳಿಗೆ ಉಡಿ ತುಂಬಲಾಯಿತು.ಈ ಸಂದರ್ಭದಲ್ಲಿ ವಿಶ್ವನಾಥ ಕನ್ನೂರ, ಹನುಮಂತಪ್ಪ ಬಿಂಗಿ, ಬಸವರಾಜ ಹಳ್ಳೂರ, ಸೂಚಪ್ಪ ದೇವರಮನಿ, ರುದ್ರಗೌಡಗೌಡಪ್ಪನವರ, ಮರೇಗೌಡ ಬೋದುರ, ಅಂಬಸಾ ರಂಗ್ರೇಜ್, ತಿಮ್ಮನಗೌಡ ಪೊಲೀಸ್ ಪಾಟೀಲ್, ಬಸವರಾಜ ದ್ಯಾವಣ್ಣನವರ, ಬಸಪ್ಪ ದೋಟಿಹಾಳ, ಮೌನೇಶ ಪತ್ತಾರ, ರಾಮಣ್ಣ ಬಂಡಿವಡ್ಡರ, ಪರಸಪ್ಪ ಹೊಸ ಮನಿ, ಬಿ.ಎಲ್. ಬಿಂಗಿ, ಶ್ರೀಶೈಲ್ ಮೋಟಗಿ, ಭೀಮಣ್ಣ ಕಮ್ಮಾರ, ದ್ಯಾಮಣ್ಣ ತಳವಾರ, ಸಕ್ರಪ್ಪ ಬಿಂಗಿ, ಪರಸಪ್ಪ ಬಿಂಗಿ, ದ್ಯಾಮಣ್ಣ ಬಿಂಗಿ, ನಾಗರಾಜ ಸೇಬಿನಕಟ್ಟಿ, ಮೌನೇಶ ಕಮ್ಮಾರ ಸೇರಿದಂತೆ ಇತರರು ಇದ್ದರು.